# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 30 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 13–08–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 30 | Title- Code: KARKAN 28269 | Chitradurga | Date: 13-08-2024 Tuesday | Page: 4 | Price: Rs. 2-00

**ಒಳಪುಟದ ಸುದ್ದಿಗಳು**

ಸರ್ಕಾರಿ ನೌಕರರ ಮಕ್ಕಳು ಸತ್ಪ್ರಜೆಗಳಾಗಿ ನಾಡಿಗೆ ಕೀರ್ತಿ ತರಲಿ– ಸಿ.ಎಸ್. ಷಡಾಕ್ಷರಿ 2

ಗಂಜಿಗುಂಟೆ ನಿವೇಶನರಹಿತ ಕುಟುಂಬಗಳ ಮುಷ್ಕರ: ಶಾಸಕ ಭರವಸೆ ಮೇರೆಗೆ ವಾಪಸ್ 3

ತೃತೀಯ ಲಿಂಗಿಗಳ ಸಬಲೀಕರಣಕ್ಕೆ ಕ್ರಾಂತಿಕಾರಿ ಹೆಜ್ಜೆಗಳು 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಮನೆ ಮನಗಳಲ್ಲಿ ಹಾರಾಡಲಿ ರಾಷ್ಟ್ರಧ್ವಜ : ಮೆರೆಯಲಿ ರಾಷ್ಟ್ರಪ್ರೇಮ–ಬಿ.ಟಿ. ಕುಮಾರಸ್ವಾಮಿ

# ಇಂದಿನಿಂದ ಹರ್ ಘರ್ ತಿರಂಗಾ

» **ಚಿತ್ರದುರ್ಗ**

78ನೇ ಸ್ವಾತಂತ್ರ್ಯಮಹೋತ್ಸವ ಹಿನ್ನಲೆಯಲ್ಲಿ ಆ.13 ರಿಂದ 15 ವರೆಗೆ ಹರ್ ಘರ್ ತಿರಂಗಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಮೂರು ದಿನಗಳ ಕಾಲ ಜಿಲ್ಲೆಯ ಪ್ರತಿಯೊಬ್ಬರು ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸುವ ಮೂಲಕ ರಾಷ್ಟ್ರಪ್ರೇಮ ಮೆರೆಯಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮನವಿ ಮಾಡಿದ್ದಾರೆ.

ಹರ್ ಘರ್ ತಿರಂಗಾ ಅಬಿಯಾನ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಭಾರತದ ತ್ರಿವರ್ಣ ಧ್ವಜ ನಮ್ಮೆಲ್ಲರ ಅಸ್ಮಿತೆಯ ಪ್ರತೀಕ. ಇದಕ್ಕೆ ಚ್ಯುತಿ ಬಾರದ ಹಾಗೆ ಪ್ರತಿಯೊಬ್ಬರು ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಿ, ಅದರ ಸೆಲ್ಫೀ ಫೋಟೋವನ್ನು ವೆಬ್‌ಸೈಟ್ ೩ಚಿಡಿರಂಚಿಡಿಣಬಿಡಿಚಿಟರಿಂಚಿ.ಛಿಠಿಟ ನಲ್ಲಿ ಅಪ್‌ಲೋಡ್ ಮಾಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ಆಗಸ್ಟ್ 13 ರಿಂದ 15 ರವರೆಗೆ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ, ಅಂಗನವಾಡಿ ಕೇಂದ್ರ, ಶಾಲಾ–ಕಾಲೇಜು, ಸರ್ಕಾರಿ ಕಚೇರಿ, ನ್ಯಾಯಬೆಲೆ ಅಂಗಡಿ, ಸಂಘ–ಸಂಸ್ಥೆಗಳು, ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಬೇಕು. ಧ್ವಜಾರೋಹಣ ಮಾಡುವ ಸಂದರ್ಭದಲ್ಲಿ ಬಾವುಟಕ್ಕೆ ಅಗೌರವ ತೋರಬಾರದು. ಕಡ್ಡಾಯವಾಗಿ ಧ್ವಜ ಸಂಹಿತೆಯನ್ನು ಪಾಲಿಸಬೇಕು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನಗಳನ್ನು ಸ್ಮರಿಸಬೇಕು. ಧ್ವಜ ಸಂಹಿತೆಯಂತೆ ಪ್ರತಿದಿನ ಸಂಜೆ ಸೂರ್ಯಾಸ್ತದ ಮೊದಲು ಧ್ವಜವನ್ನು ಇಳಿಸಬೇಕು. ಈ ಮೂಲಕ ಹರ್ ಘರ್ ತಿರಂಗಾ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

**ಬೈಕ್ ರ್‍ಯಾಲಿ ಹಾಗೂ ದೇಶಭಕ್ತಿ ಗೀತೆಗಳ ಗಾಯನ:** ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಸ್ಥಳೀಯ ಸಂಸ್ಥೆಗಳು, ನಗರಸಭೆ, ಕ್ರೀಡಾ ಇಲಾಖೆ ಹಾಗೂ ಶಿಕ್ಷಣ ಇಲಾಖೆಗಳು ಸಹಯೋಗದೊಂದಿಗೆ ಆಗಸ್ಟ್ 13 ರಂದು ಬೈಕ್ ರ್‍ಯಾಲಿ ಆಯೋಜಿಸಬೇಕು. ಆಗಸ್ಟ್ 14 ರಂದು ಬೆಳಿಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ತಿರಂಗಾ ಯಾತ್ರೆ ಕೈಗೊಳ್ಳಬೇಕು. ಶಾಲಾ ಕಾಲೇಜುಗಳಲ್ಲಿ ಸ್ವಾತಂತ್ರ್ಯ ಹೋರಾಟದ ಮಹತ್ವ ಸಾರಲು ಚಿತ್ರಕಲೆ, ದೇಶ ಭಕ್ತಿ ಗೀತೆ, ಆಶುಭಾಷಣ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಬೇಕು. ಆಗಸ್ಟ್ 14 ರಂದು ಸಂಜೆ 5:30ಕ್ಕೆ ನಗರದ ಒನಕೆ ಓಬವ್ವ ವೃತ್ತದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ವತಿಯಿಂದ ದೇಶಭಕ್ತಿ ಗೀತೆಗಳ ಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಕಚೇರಿಗಳ ಮುಖ್ಯಸ್ಥರು ಹಾಗೂ ಸಿಬ್ಬಂದಿ ತಪ್ಪದೇ ಪಾಲ್ಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನಿರ್ದೇಶನ ನೀಡಿದರು.



ನಗರದ ತ.ರಾ.ಸು. ರಂಗಮಂದಿರ ಆವರಣದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಕಚೇರಿಯಲ್ಲಿ5000ರಾಷ್ಟ್ರಧ್ವಜಗಳು ಲಭ್ಯವಿದ್ದು, ಪ್ರತಿ ರಾಷ್ಟ್ರಧ್ವಜಕ್ಕೆ ರೂ.26 ದರ ನಿಗದಿಪಡಿಸಲಾಗಿದೆ. ಧ್ವಜ ಬೇಕಾದವರು ಖರೀದಿಸಬಹುದು. ಎಲ್ಲರಿಗೂ ಸುಲಭವಾಗಿ ಲಭ್ಯವಾಗುವ ರೀತಿಯ ಪ್ರತಿ ಅಂಚೆ ಕಚೇರಿ ಹಾಗೂ ರೈಲ್ವೇ ನಿಲ್ದಾಣಗಳಲ್ಲಿಯೂ ರಾಷ್ಟ್ರಧ್ವಜ ಮಾರಾಟ ಮಾಡಲಾಗುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಮಾಹಿತಿ ನೀಡಿದರು.ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಜಿ.ಪಂ. ಉಪಕಾರ್ಯದರ್ಶಿ ತಿಮ್ಮಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿ ಸುಬ್ರಾನಾಯ್ಕ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಆಸ್ಪತ್ರೆಯ ಸಿಟಿ ಸ್ಕ್ಯಾನ್ ವಿಭಾಗದ ಮಂಜುನಾಥ್ ನಿಧನ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ (ಸಿಟಿ ಸ್ಕ್ಯಾನ್) ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಮಂಜುನಾಥ್ ಪತ್ನಿ ಕಿರುಕುಳಕ್ಕೆ ಬೇಸತ್ತು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಚಿತ್ರದುರ್ಗ ನಗರದ ಐ.ಯು.ಡಿ.ಪಿ ಲೇಔಟ್ ನಿವಾಸಿ ಮಂಜುನಾಥ(38) ಆತ್ಮಹತ್ಯೆ ಮಾಡಿಕೊಂಡಿದ್ದು ಕಳೆದ ಎರಡು ವರ್ಷಗಳ ಹಿಂದೆ ಚೇತನ ಜೊತೆ ವಿವಾಹ ನೇರೇರಿತ್ತು. ಕೌಟುಂಬಿಕ ಕಲಹದ ಹಿನ್ನಲೆ ಪತಿಗೆ ಚೇತನ ಕಿರುಕುಳ ನೀಡುತ್ತಿದ್ದಳು ಎಂದು ಚೇತನ ವಿರುದ್ದ ಮಂಜುನಾಥ್ ಪೋಷಕರು ಆರೋಪಿಸಿದ್ದಾರೆ,ಎನ್ನಲಾಗಿದೆ. ಪತ್ನಿ ಚೇತನ ಪತಿ ಮುಂಜುನಾಥ್ ವಿರುದ್ದ ಮಹಿಳಾ ಠಾಣೆಗೆ ದೂರು ನೀಡಿದ್ದಳು ಈ ವಿಷಯ ತಿಳಿದು ಮನೆಯಲ್ಲಿ ಮಂಜುನಾಥ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂಬುದು ಕುಟುಂಬ ಮೂಲಗಳಿಂದ ತಿಳಿದು ಬಂದಿದೆ, ಇನ್ನು ತನಿಕೆಯಿಂದ ಸತ್ಯತೆ ಹೊರ ಬರಬೇಕಾಗಿದೆ.

### ಆಗಸ್ಟ್ 13 ರಂದು ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ತರಬೇತಿ ಕಾರ್ಯಗಾರ

» **ಚಿತ್ರದುರ್ಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ, ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಹಾಗೂ ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಗಾರ ಚಳ್ಳಕೆರೆ ನಗರದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಆಗಸ್ಟ್ 13 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ತಾಲ್ಲೂಕು ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜೆ.ಎಂ.ಎಫ್.ಸಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಮೀ. ಪಿ. ನಂದ್ಯಾಲ್ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಸಿಇಓ ಎಸ್. ಜೆ.ಸೋಮಶೇಖರ್, ಪೊಲೀಸ್ ಅಧೀಕ್ಷಕ ಧರ್ಮೇಂದ್ರಕುಮಾರ್ ಮೀನಾ, ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಜೆ.ಎಂ.ಎಫ್.ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಹೇಮ.ಹೆಚ್.ಆರ್, ಚಳ್ಳಕೆರೆ ಬಾರ್ ಕೌನ್ಸಿಲ್ ಅಧ್ಯಕ್ಷ ಕೆ.ಎಂ.ನಾಗರಾಜ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಪ್ರಭಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಡಿ.ಕೆ.ಶೀಲಾ, ಜಿ.ಟಿ.ಬಸವರಾಜ್, ಬಾಲ ನ್ಯಾಯ ಮಂಡಳಿ ಸದಸ್ಯರಾದ ಸುಮನ ಎಸ್ ಅಂಗಡಿ, ಮಧುಕರ್, ತಹಶೀಲ್ದಾರ್ ರೆಹಾನ್ ಪಾಷ, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್.ಈ, ಚಳ್ಳಕೆರೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹರಿಪ್ರಸಾದ್.ಸಿ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಶ್.ಕೆ.ಎಸ್. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಕಾಶಿ ಭಾಗವಹಿಸುವರು. ಕೊಪ್ಪಳ ಜಿಲ್ಲಾಧಿಕಾರಿ ಕಚೇರಿಯ ಯನಿಸೆಫ್ ಮಕ್ಕಳ ಸಂರಕ್ಷಣ ಯೋಜನೆ ಪ್ರಾದೇಶಿಕ ಸಂಯೋಜಕ ರಾಘವೇಂದ್ರ ಭಟ್ ಸಂಪನ್ಮೂಲ ವ್ಯಕ್ತಿಯಾಗಿ ತರಬೇತಿ ಕಾರ್ಯಗಾರ ನಡೆಸಿಕೊಡುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತ.ಸಿ ತಿಳಿಸಿದ್ದಾರೆ.

# ಬಾಂಗ್ಲದಲ್ಲಿ ಹಿಂದೂಗಳ ಹತ್ಯೆ ಖಂಡಿಸಿ ಪ್ರತಿಭಟನೆ

» **ಚಿತ್ರದುರ್ಗ**




ಬಾಂಗ್ಲದಲ್ಲಿ ಹಿಂದೂಗಳ ಹತ್ಯೆ ಹಾಗೂ ದೌರ್ಜನ್ಯ ಖಂಡಿಸಿ ಚಿತ್ರದುರ್ಗದ ಗಾಂಧಿ ಸರ್ಕಲ್‌ನಲ್ಲಿ ವಿಶ್ವ ಹಿಂದೂ ಪರಿಷತ್‌ನಿಂದ ಗಾಂಧಿಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಿಶ್ವ ಹಿಂದೂ ಪರಿಷತ್ ಪ್ರಾಂತ್ಯ ಸಂಯೋಜಕ ಪ್ರಭಂಜನ್ ಬಾಂಗ್ಲಾದಲ್ಲಿ ಹಿಂದುಗಳ ಮೇಲೆ ದೌರ್ಜನ್ಯ ನಡೆಯುತ್ತಿದೆ ಇದನ್ನು ಎಲ್ಲರು ಖಂಡಿಸಬೇಕಿದೆ ಇದರ ಬಗ್ಗೆ ರಾಷ್ಟ್ರಪತಿಗಳಿಗೆ ಮನವಿಯನ್ನು ಸಲ್ಲಿಸಲಾಗಿದೆ ಅಲ್ಲಿನ ಹಿಂದುಗಳಿಗೆ ರಕ್ಷಣೆಯನ್ನು ನೀಡುವಂತಾಗಬೇಕಿದೆ. ಈ ಸಮಸೆಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಸಮಸ್ಯೆಯನ್ನು ತೆಗೆದುಕೊಂಡು ಹೋಗಿ ಇದಕ್ಕೆ ಪರಿಹಾರವನ್ನುಕಂಡುಕೊಳ್ಳಬೇಕಿದೆ. ಅಲ್ಲಿನ ಹಿಂದುಗಳನ್ನು ರಕ್ಷಣೆ ಮಾಡುವಂತಕಾರ್ಯವಾಗಬೇಕಿದೆ. ಎಂದು ಕೇಂದ್ರ ಗೃ ಸಚವರಾದ ಅಮಿತಾ ಷಾರವರನ್ನು ಸಹಾ ಬೇಟಿ ಮನವಿ ಮಾಡಲಾಗಿದೆ. ಅಲ್ಲಿ ನಡೆದ ಅತ್ಯಾಚಾರ ಅನಾಚಾರ ಹತ್ಯೆಗಳು ಎಲ್ಲರಿಗೂ ಸಹಾ ತಿಳಿಯಬೇಕಿದೆ ಇದಕ್ಕಾಗಿ ಮಾನವ ಸರಪಳಿಯನ್ನು ನಿರ್ಮಾಣ ಮಾಡಿ ಪ್ರತಿಭಟನೆಯನ್ನು ಮಾಡಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಸಂಸದರಾದ ಗೊವಿಂದ ಕಾರಜೋಳ ಮಾಜಿ ಶಾಸಕರಾದ ಜಿ.ಹೆಚ್.ತಿಪ್ಪಾರೆಡ್ಡಿ ಬಿಜೆಪಿ ಜಿಲ್ಯಾದ್ಯಕ್ಷ ಎ.ಮುರಳಿ ವಿಶ್ವ ಹಿಂದೂ ಪರಿಷತ್ತಿನ ರುದ್ರೇಶ್, ಭದರಿನಾಥ್, ಕೇಶವ್, ಅಶೋಕಕೊಟ್ಲ, ದೇವರಾಜ್, ರಂಗಸ್ವಾಮಿ, ಬಿಜೆಪಿ ಪ್ರದಾನ ಕಾರ್ಯದರ್ಶಗಳಾದ ಸುರೇಶ್ ಸಿದ್ದಾಪುರ, ಸಂಪತ್‌ಕುಮಾರ್, ನವಿನ್ ಚಾಲುಕ್ಯ, ಕಲ್ಲೇಶಯ್ಯ, ದಗ್ಗೆಶಿವಪ್ರಕಾಶ್, ನಾಗರಾಜ್ ಬೇದ್ರೆ, ನಗರ ಸಭಾ ಸದಸ್ಯರಾದ ಹರೀಶ್, ಸೂಪ್ಪು ಸುರೇಶ್, ಬಸಮ್ಮ, ನಂದಿ ನಾಗರಾಜ್, ಚಂದ್ರಿಕಾ ಲೋಕನಾಥ, ಕಾಂಚನ, ವೀಣಾ ಪಾಲ್ಗೊಂಡಿದ್ದರು.

## ಮಳೆ ಕೊರತೆ ಕಾರಣ ಸಾವಿರಾರು ಎಕರೆ ಸಾವೆ ಬೆಳೆ ಕೈಕೊಟ್ಟ ಹಿನ್ನೆಲೆ: ಪರಿಹಾರಕ್ಕಾಗಿ ರೈತರ ಮನವಿ



**ಚಳ್ಳಕೆರೆ:** ತಾಲ್ಲೂಕಿನಾದ್ಯಂತ ರೈತರು ಶೇಂಗಾ ಬೆಳೆಯನ್ನು ಬೆಳೆಯಲು ಉತ್ಸಹಕಾರಾಗಿದ್ದು, ದಿಢೀರನೆ ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಸಲಹೆ ಮೇರೆಗೆ ಶೇಂಗಾಗೆ ಪರ್ಯಾಯ ಬೆಳೆಯಾಗಿ ಸಿರಿಧಾನ್ಯಗಳಲ್ಲಿ ಹೆಚ್ಚು ಅತಿಕಡಿಮೆ ಅವಧಿ ಹಾಗೂ ಕಡಿಮೆ ಮಳೆಯಲ್ಲೂ ಉತ್ತಮ ಬೆಳೆಯಾಗಬಹುದಾದ ಸಾವೆಯನ್ನು ಬೆಳೆಯಲು ಆರಂಭಿಸಿದ್ದಾರೆ.

ಇದೇ ಮೊದಲ ಬಾರಿಗೆ ಚಳ್ಳಕೆರೆ ತಾಲ್ಲೂಕಿನಾದ್ಯಂತ ಸಾವೆ ಬೆಳೆಯನ್ನು ಪರ್ಯಾಯ ಬೆಳೆಯನ್ನಾಗಿ ಅನೇಕ ರೈತರು ಆಯ್ಕೆ ಮಾಡಿಕೊಂಡಿದ್ದರು. ತಾಲ್ಲೂಕಿನಾದ್ಯಂತ ಸುಮಾರು 1845 ಹೆಕ್ಟೇರ್ ಪ್ರದೇಶದಲ್ಲಿ ಸಾವೆ ಬೆಳೆ ಬಿತ್ತನೆಯಾಗಿದೆ.

ಪುಟ ↘ 2

**ಪ್ರಮುಖ ಸುದ್ದಿ**

# ಸಮಾಜ ಕಟ್ಟುವಾಗ ವಿವಿಧ ಮಾತುಗಳಿಗೆ ಕಿವಿ ಕೂಡಬಾರದು

» **ಚಿತ್ರದುರ್ಗ**

ಸಮಾಜವನ್ನು ಕಟ್ಟುವಾಗ ಬರುವಂತ ವಿವಿಧ ರೀತಿಯ ಮಾತುಗಳಿಗೆ ಕಿವಿ ಕೂಡಬಾರದು, ಅವುಗಳನ್ನು ಕೊಡವಿಕೊಂಡು ಮುನ್ನಡೆಯುವುದರ ಮೂಲಕ ಸಮಾಜವನ್ನು ಕಟ್ಟುವ ಕೆಲಸವನ್ನು ಮಾಡಬೇಕಿದೆ ಆಗ ಮಾತ್ರ ಸಮಾಜ ಪ್ರಗತಿ ಹೊಂದಲು ಸಾಧ್ಯವಿದೆ ಎಂದು ಭೋವಿ ಗುರು ಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಹೊರವಲಯದ ಭೋವಿ ಗುರುಪೀಠದಲ್ಲಿ ಭಾನುವಾರ ಸಂಜೆ ನಡೆದ ಜು. 20 ರಂದು ನಡೆದ ಶ್ರೀಗಳ ದೀಕ್ಷಾ ರಜತ ಮಹೋತ್ಸವವನ್ನು ಯಶಸ್ವಿಗೊಳಿಸಿದ ಕಾರ್ಯಕರ್ತರಿಗೆ ಅಭಿನಂದನಾಸಮಾರಂಭದಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಯಾವುದೇ ಒಂದು ಕಾರ್ಯಕ್ರಮ ನಡೆಯಬೇಕಾದರೆ ಹಲವಾರು ಜನರ ಸಹಾಯ ಸಹಕಾರ ಅಗತ್ಯವಾಗಿದೆ ಇದೆ ರೀತಿ ಶ್ರೀಮಠದ ದೀಕ್ಷಾ ರಜತ ಮಹೋತ್ಸವದ ಕಾರ್ಯಕ್ರಮ ನಿಮ್ಮಗಳ ಸಹಕಾರ ಹೆಚ್ಚಿನ ಮಟ್ಟದಾಗಿದೆ. ನಮಗೆ ಇಂತಹ ಭಕ್ತರು ಸಿಕ್ಕಿರುವುದು ಪುಣ್ಯವಾಗಿದೆ, ಒಂದು ಕಾಲದಲ್ಲಿ ಏನು ಇಲ್ಲದೆ ಗುಡಿಸಲಿನಲ್ಲಿ ಇದ್ದ ನಿಮ್ಮ ಗುರುಗಳನ್ನು ಈಗ ವಾಸಕ್ಕೆ ಉತ್ತಮವಾದ




ಕಟ್ಟಡ, ಓಡಾಡಲು ಕಾರನ್ನು ನೀಡಲಾಗಿದೆ. ಇದರ ಮೂಲಕ ರಾಜ್ಯದಲ್ಲಿ ಪ್ರವಾಸ ಮಾಡುವುದರ ಮೂಲಕ ಸಮಾಜವನ್ನು ಕಟ್ಟಲಾಗುತ್ತಿದೆ ಎಂದರು.

ಅಂಬೇಡ್ಕರ್ ರವರ ಮಾತಿನಂತೆ ಶಿಕ್ಷಣ,ಸಂಘಟನೆ,ಹೋರಾಟಕ್ಕೆ ನಮ್ಮ ಸಮಾಜ ಹೆಚ್ಚಿನ ಮಹತ್ವವನ್ನು ನಿಡಲಾಗಿದೆ. ನಮ್ಮ ಮಠದಲ್ಲಿ ಬಡ ಮಕ್ಕಳಿಗೆ ಪ್ರಸಾದ ಜೊತೆಗೆ ಉಚಿತವಾದ ಶಿಕ್ಷಣವನ್ನು ನೀಡಲಾಗುತ್ತಿದೆ, ಇನ್ನೂ ಸಮಾಜವನ್ನು ರಾಜ್ಯ ಅಲ್ಲದೆ ಹೊರ ರಾಜ್ಯಗಳಲ್ಲಿಯೂ ಸಹಾ ಕಟ್ಟುವಂತ ಕಾರ್ಯವನ್ನು ಮಾಡಲಾಗುತ್ತಿದೆ ಇದರೊಂದಿಗೆ ಸಮಾಜಕ್ಕೆ ಧಕ್ಕೆಯಾದಾಗಲೆಲ್ಲ ಹೋರಾಟವನ್ನು ಮಾಡುವುದರ ಮೂಲಕ ಸಮಾಜವನ್ನು ಮುನ್ನಡೆಸುವ ಕಾರ್ಯವನ್ನು ಮಾಡಲಾಗುತ್ತದೆ. ನಮ್ಮ ಸಮಾಜದವರು ಶಿಕ್ಷಣವನ್ನು ಪಡೆಯುವುದರ ಮೂಲಕ ವಿವಿಧ ರೀತಿಯ ಹುದ್ದೆಗಳಲ್ಲಿ ಇರಬೇಕಿದೆ, ಇದರಿಂದ ನಮ್ಮ ಸಮಾಜಕ್ಕೂ ಅನುಕೂಲ ನಿಮಗೂ ಸಹಾ ಅನುಕೂಲವಾಗಲಿದೆ ಎಂದು ಶ್ರೀಗಳು ತಿಳಿಸಿದರು. ಹಿಂದಿನ ಕಾಲದಲ್ಲಿ ನಮ್ಮ ಸಮುದಾಯದವರು ಒಡ್ಡರು ಎಂದು ಹೇಳಿಕೊಳ್ಳುವುದಕ್ಕೆ ಹಿಂಜರಿಯುತ್ತಿದ್ದರು ಆದರೆ ಈಗಲೂ ಸಹಾ ನಮ್ಮವರು ತಮ್ಮ ಜಾತಿಯನ್ನು ಹೇಳುತ್ತಿಲ್ಲ, ರಾಜ್ಯದಲ್ಲಿ ನಮ್ಮವರ ಸಂಖ್ಯೆ ಅಧಿಕವಾಗಿದ್ದರು ಇದ್ದರೂ ಸಹಾ ಸರಿಯಾದ ರೀತಿಯಲ್ಲಿ ಜಾತಿಯನ್ನು ನಮೂದಿಸದಿದ್ದರಿಂದ ನಮ್ಮ ಜಾತಿಯವರು ಎಷ್ಟಿದ್ದಾರೆ ಎಂದು ನಿಖರವಾಗಿ ಸಂಖ್ಯೆ ಸಿಗುತ್ತಿಲ್ಲ, ಇದರ ಬಗ್ಗೆ ನಾವುಗಳೇ ನಮ್ಮ ಜನಗಣತಿಯನ್ನು ಮಾಡಬೇಕಿದೆ, ಇದರಿಂದ ನಮ್ಮವರ ನಿಖರವಾದ ಸಂಖ್ಯೆ ಸಿಗಲು ಸಾಧ್ಯವಿದೆ. ನಮ್ಮವರು ಜಾತಿಯ ಬಗ್ಗೆ ಗರ್ವವನ್ನು ಪಡಬೇಕಿದೆ ಇದನ್ನು ಬಹಿರಂಗವಾಗಿ ಹೇಳುವಂತೆ ಆಗಬೇಕಿದೆ. ನಾವುಗಳು ಬರು ಬರುತ್ತಾ ಪರಿವರ್ತನೆಯ ಕಂಡು ಕೊಂಡಾಗ ನಮ್ಮ ಘನತೆ ಗೌರವ ಹೆಚ್ಚಾಗುತ್ತದೆ. ಸವಾಲುಗಳನ್ನು ಸಮನಾಗಿ ಸ್ವೀಕಾರ ಮಾಡಬೇಕಿದೆ ಎಂದರು.

ಭೋವಿಅಭೀವೃದ್ಧಿನಿಗಮದಅಧ್ಯಕ್ಷರಾದ ರವಿ ಮಾತನಾಡಿ, ಸಮಾಜದ ಯಾವುದೇ ಕಾರ್ಯಕ್ರಮವಾದರೂ ಸಹಾ ಅದರಲ್ಲಿ ಏನಾದರೂ ಆದರೆ ಅದನ್ನು ಹೇಳದೆ ನುಂಗಿಕೊಂಡು ಹೋಗುವಂತ ಗುಣ ನಮ್ಮಲ್ಲಿ ಇರಬೇಕಿದೆ. ಸಮಾಜದ ಗುರುಗಳಿಗೆ ಶಕ್ತಿಯನ್ನು ತುಂಬವ ಕಾರ್ಯವಾಗಬೇಕಿದೆ ನಮ್ಮ ಸಮಾಜದವರಿಗೆ ಬಲವನ್ನು ನೀಡಬೇಕಿದೆ. ನಮ್ಮ ಕಾರ್ಯಕ್ರಮವನ್ನು ನೋಡಿ ಸಹಾಯ ಮಾಡದವರು ಈಗ ನೋವನ್ನು ಅನುಭವಿಸುತ್ತಿದ್ದಾರೆ. ಸಮಾಜದ ಸಹಾಯವನ್ನು ಪಡೆದವರು ಮರಳಿ ಸಮಾಜಕ್ಕೆ ಸಹಾಯವನ್ನು ಮಾಡುವವರ ಸಂಖ್ಯೆ ನಮ್ಮಲ್ಲಿ ಕಡಿಮೆ ಇದೆ. ಜವಾಬ್ದಾರಿಯಿಂದ ಸಮಜವನ್ನು ಮುನ್ನೆಡೆಸುವ ಕಾರ್ಯವನ್ನು ಮಾಡಬೇಕಿದೆ.ನಮ್ಮ ಸಮಾಜದವತಿಯಿಂದ ಒಂದೇ ಸಂಘಟನೆ, ಒಬ್ಬರೇ ಗುರುಗಳು ಇರಬೇಕು, ಹೊಟ್ಟೆ ಪಾಡಿಗಾಗಿ ಸಂಘ ಹುಟ್ಟಬಾರದು ಸಮಾಜದ ಪ್ರಗತಿಗಾಗಿ ಎಲ್ಲರು ನಡೆಯಬೇಕಿದೆ. ಸಮಾಜದ ಹೆಸರಿನಲ್ಲಿ ಹತ್ತಾರು ಸಂಘಟನೆಗಳು ಇರಬಾರದು ಎಂದರು.

ಪುಟ ↘ 2



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |

| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |

## ಫಾಸ್ಟ್ ನ್ಯೂಸ್

### ಸಮಾಜ ಕಟ್ಟುವಾಗ ವಿವಿಧ ಮಾತುಗಳಿಗೆ ಕಿವಿ ಕೂಡಬಾರದು

» ಮೊದಲ ಪುಟದಿಂದ

ಸಮಾಜ ಪಕ್ಷಾತೀತವಾಗಿ ಇರಬೇಕಿದೆ. ಪಕ್ಷಾತೀತವಾಗಿ ಇದ್ದರೆ ಮಾತ್ರ ಸಮಾಜಕ್ಕೆ ಬನ್ನಿ, ನಾವುಗಳು ಹಾಕುವ ಫ್ಲೆಕ್ಸ್ ಎಲ್ಲರ ಭಾವಚಿತ್ರಗಳು ಇರಬೇಕಿದೆ ಯಾರನ್ನು ಸಹಾ ಬಿಡಬಾರದು, ನಮ್ಮಲ್ಲಿ ಸಂಘಟನೆ ಬಲವಾಗಿ ಇದ್ದಾಗ ಮಾತ್ರ ಏನಾದರೂ ಅನಾಹುತವಾದರೆ ರಕ್ಷಣೆ ಸಿಗಲು ಸಾಧ್ಯವಿದೆ. ನಮ್ಮ ಶಕ್ತಿಯನ್ನು ಪ್ರದರ್ಶನ ಮಾಡಿದರೆ ಮಾತ್ರ ರಾಜಕೀಯ ಪಕ್ಷಗಳು ನಮ್ಮನ್ನು ಗುರುತಿಸಲು ಸಾಧ್ಯವಿದೆ. ನಮ್ಮ ಸಮಾಜದ ಗುರುಗಳು ಇರುವುದು ನಮ್ಮ ಸಮಾಜ ಸುಧಾರಣೆ ಮಾಡಲು ಹೊರೆತು ಭೋವಿ ನಿಗಮದ ಅವ್ಯವಹಾರದ ವಿರುದ್ದ ಹೋರಾಟ ಮಾಡಲು ಅಲ್ಲ ಎಂದು ತಿಳಿಸಿದರು.ರಘುಚಂದನ್ ಮಾತನಾಡಿ ನಮ್ಮ ಸಮಾಜದ ಎಲ್ಲೆ ಇದ್ದರೂ ಸಹಾ ಭೋವಿ ಎನ್ನುವುದನ್ನು ಮರೆಯಬಾರದು, ನಮ್ಮ ಸಮಾಜ, ಮಠ, ಗುರುಗಳನ್ನು ಗೌರವಿಸಬೇಕಿದೆ, ಎಲ್ಲಿದ್ದರೂ ಸಹಾ ನಮ್ಮ ತನವನ್ನು ಬಿಡಬಾರದು, ಸಮಾಜದಲ್ಲಿ ಹುಟ್ಟಿದ ನಾವುಗಳು ಸಮಾಜದ ಋಣವನ್ನು ತೀರಿಸುವ ಕಾರ್ಯವಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರಾದ ರವಿ ಮಾಕಳಿ, ಹಾವೇರಿ ಜಿಲ್ಲಾಧ್ಯಕ್ಷರಾಧ ರವಿ ಪೂಜಾರ್,ಬೀದರ್ ಜಿಲ್ಲಾಧ್ಯಕ್ಷರಾದ ವಾಣಿಕ್‌ರಾವ್ ಒಡೆಯರ್, ಬೆಳಗಾವಿ ಜಿಲ್ಲಾಧ್ಯಕ್ಷರಾದ ಲಕ್ಷ್ಮಣ್ ಗಾಡಿವಡ್ಡರ್,ಕೊಪ್ಪಳ ಜಿಲ್ಲಾಧ್ಯಕ್ಷರಾದ ಸತ್ಯಪ್ಪ, ಉತ್ತರ ಕನ್ನಡ ಜಿಲ್ಲಾಧ್ಯಕ್ಷರಾದ ಕೃಷ್ಣ, ದಾವಣಗೆರೆ ಜಿಲ್ಲಾಧ್ಯಕ್ಷರಾದ ಸಿದ್ದಪ್ಪ, ಹೊಸಪೇಟೆ ಜಿಲ್ಲಾಧ್ಯಕ್ಷರಾದ ದೊಡ್ಡ ರಾಮಣ್ಣ, ರಾಯಚೂರು ಜಿಲ್ಲಾಧ್ಯಕ್ಷರಾದ ಮಹೇಶ್, ಮಂಗಳೂರು ಜಿಲ್ಲಾಧ್ಯಕ್ಷರಾದ ಕುಮಾರ್, ಹಾಸನ ಜಿಲ್ಲಾಧ್ಯಕ್ಷರಾದ ಉಮಾ ಶಂಕರ್, ಬಳ್ಳಾರಿ ರಾಮಾಂಜಿ, ವಿಜಾಪುರ ಜಿಲ್ಲಾಧ್ಯಕ್ಷ ನಾಗಪ್ಪ ಒಡ್ಡರ್, ಎಸ್.ಜೆ.ಎಸ್.ಜ್ಞಾನ ಪೀಠದ ನಿರ್ದೇಶಕರಾದ ಮಂಜುನಾಥ್ ಹನುಮಂತಪ್ಪ, ಕೃಷ್ಣಮೂರ್ತಿ, ಆಂಜನೇಯ, ಕಾರ್ಯದರ್ಶಿ ಡಿ.ಸಿ.ಮೋಹನ್, ಸಿಇಓ ಗೋವಿಂದಪ್ಪ ಜಿಲ್ಲಾಧ್ಯಕ್ಷರಾದ ತಿಪ್ಪೇಸ್ವಾಮಿ ಸೇರಿದಂತೆ ರಾಜ್ಯದ ವಿವಿಧೆಡೆಗಳಿಂದ ಭಕ್ತಾಧಿಗಳು ಆಗಮಿಸಿದ್ದರು. ಸಮಾರಂಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಮುಖಂಡರು ಕಾರ್ಯಕ್ರಮದ ಬಗ್ಗೆ ತಮ್ಮ ಅಭೀಪ್ರಾಯವನ್ನು ತಿಳಿಸಿದರು.

### ಆಗಸ್ಟ್ 24 ರಂದು ಬಿ.ಕಾಂ ಪರೀಕ್ಷೆ

» ದಾವಣಗೆರೆ

ತಾಂತ್ರಿಕ ಕಾರಣಗಳಿಂದ ಮುಂದೂಡಲಾಗಿದ್ದ ಸ್ನಾತಕ ಬಿ.ಕಾಂ ಪದವಿಯ ಇ-ಕಾಮರ್ಸ್ ವಿಷಯದ ಪರೀಕ್ಷೆಯನ್ನು ಆಗಸ್ಟ್ 24 ರಂದು ಬೆಳಿಗ್ಗೆ 10 ರಿಂದ 12 ಗಂಟೆ ವರೆಗೆ ನಡೆಸಲಾಗುವುದು ಎಂದು ದಾವಣಗೆರೆ ವಿಶ್ವವಿದ್ಯಾನಿಲಯ ಪರೀಕ್ಷಾಂಗ ಕುಲಸಚಿವ ಪ್ರೊ.ಸಿ.ಕೆ.ರಮೇಶ್ ತಿಳಿಸಿದ್ದಾರೆ.

### ಅಂಗಡಿ ರಂಗಮ್ಮ ನಿಧನ

» ಚಳ್ಳಕೆರೆ



ಚಳ್ಳಕೆರೆ ನಗರದ ತ್ಯಾಗರಾಜ ನಗರ ನಿವಾಸಿ ಆರ್.ರಂಗವ್ವ(80) ಭಾನುವಾರ ತಡರಾತ್ರಿ ನಿಧನರಾಗಿದ್ದಾರೆ. ಮೃತರು ವಿಜಯಕರ್ನಾಟಕ ವರದಿಗಾರಬಿ.ಲೋಕೇಶ್ ಸೇರಿ ಇಬ್ಬರು ಪುತ್ರರನ್ನು ಅಗಲಿದ್ದಾರೆ. ಮೂಲ ಸ್ವಗ್ರಾಮವಾದ ಗೋಸಿಕೆರೆ ಗ್ರಾಮದ ಜಮೀನಿನಲ್ಲಿ ಸೋಮವಾರ ಅಂತ್ಯಕ್ರಿಯೆ ನೆರವೇರಿಸಲಾಗಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಆಗಸ್ಟ್ 17 ರಂದು ರಸ್ತೆ ಸುರಕ್ಷತಾ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯು ಆಗಸ್ಟ್ 17 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಭೆ ನಡೆಯಲಿದೆ ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಆಗಸ್ಟ್ 13 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಜಯನಗರ ಫೀಡರ್ ವ್ಯಾಪ್ತಿಯ ಭಗೀರಥ ಲೇಔಟ್, ಆಂಜನೇಯ ಮಂಟಪ, ಕರಿಯಮ್ಮ ದೇವಸ್ಥಾನ, ಚಿಕ್ಕನಹಳ್ಳಿ ಹೊಸ ಬಡಾವಣೆ, ಮಣಿಕಂಠ ಸರ್ಕಲ್, ರಾಷ್ಟ್ರೋತ್ಥಾನ ಶಾಲೆ, ಕಲ್ಲು ಬಡಾವಣೆ, ಜಯನಗರ ಚರ್ಚ್ ಎದುರು, ಶ್ರೀರಾಮ್ ಬಡಾವಣೆ, ನಿಟುವಳ್ಳಿ, ನಿಟುವಳ್ಳಿ ಹೊಸ ಬಡಾವಣೆ, ದುರ್ಗಾಂಬಿಕ ದೇವಸ್ಥಾನ, ಇ.ಎಸ್.ಐ ಆಸ್ಪತ್ರೆ, ನಿಟ್ಟುವಳ್ಳಿ ಸಂತೆ ಮಾರ್ಕೆಟ್, 60 ಅಡಿ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಸರ್ಕಾರಿ ನೌಕರರ ಮಕ್ಕಳು ಸತ್ಪ್ರಜೆಗಳಾಗಿ ನಾಡಿಗೆ ಕೀರ್ತಿ ತರಲಿ: ಸಿ.ಎಸ್.ಷಡಾಕ್ಷರಿ

» ಚಿತ್ರದುರ್ಗ




ಸರ್ಕಾರಿ ನೌಕರರ ಪ್ರತಿಭಾನ್ವಿತ ಮಕ್ಕಳನ್ನು ಸಂಘದಿಂದ ಗುರುತಿಸಿ, ಗೌರವಿಸುವಂತಹ ಕಾರ್ಯವನ್ನು ರಾಜ್ಯ ಸರ್ಕಾರಿ ನೌಕರರ ಸಂಘ ಮಾಡುತ್ತಿದ್ದು, ನೌಕರರ ಮಕ್ಕಳು ಕೂಡ ಅವಕಾಶಗಳನ್ನು ಬಳಸಿಕೊಂಡು ಸತ್ಪ್ರಜೆಗಳಾಗಿ ನಾಡಿಗೆ ಕೀರ್ತಿ ತರಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರು ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಸೋಮವಾರ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಸರ್ವ ಸದಸ್ಯರ ಸಭೆ, ನೌಕರರಿಗೆ ನಾಯಕತ್ವ ಗುಣಗಳು ಹಾಗೂ ವ್ಯಕ್ತಿತ್ವ ವಿಕಸನ ಕಾರ್ಯಗಾರ, ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘಟನೆಗೆ 104 ವರ್ಷಗಳ ಇತಿಹಾಸವಿದೆ. ನಮ್ಮಂತೆಯೇ ನಮ್ಮ ಸುತ್ತಲಿನ ವ್ಯವಸ್ಥೆಯೂ ಕೂಡ ಸುಂದರವಾಗಿ ಕಾಣಬೇಕಾದರೆ, ವ್ಯವಸ್ಥೆಯಲ್ಲಿ ಅಚ್ಚುಕಟ್ಟಾಗಿ ಕೆಲಸ ಮಾಡಬೇಕು. ಒಂದು ಸರ್ಕಾರಿ ಕಚೇರಿಗಿಂತ ವಿಭಿನ್ನವಾಗಿ, ವಿಶೇಷವಾಗಿರುವಂತಹ ಸಮೃದ್ಧಿಯಾದ ಸಂಘ ದೇಶದಲ್ಲಿ ಇದೆ ಎಂದರೆ ಅದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ. ರಾಜ್ಯದ ಸಂಘಟನೆಗಳ ಪೈಕಿ ಹೆಚ್ಚು ಪರಿಣಾಮಕಾರಿಯಾದ ಸಂಘಟನೆಯಾಗಿದೆ. ಇದು ಯಾವುದೇ ಪಕ್ಷಕ್ಕೆ, ಧರ್ಮಕ್ಕೆ, ಜಾತಿಗೆ ಅಂಟಿಕೊಳ್ಳದೇ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ.

ಸಂಘದಿಂದ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸುವ ಕಾರ್ಯ ಮಾಡಲಾಗುತ್ತಿದೆ. ಈ ಎಲ್ಲಾ ಸೌಲಭ್ಯಗಳನ್ನು ಬಳಸಿಕೊಂಡು ಮುಂದೊಂದು ದಿನ ಡಿಸಿ, ಎಸಿ, ಪೊಲೀಸ್, ರೈತ, ವಾಣಿಜ್ಯೋದ್ಯಮಿಗಳಾಗುತ್ತೀರೋ ಗೊತ್ತಿಲ್ಲ. ಆದರೆ ಕನಿಷ್ಠ ಪಕ್ಷ ಇದ್ಯಾವುದು ಆಗಲಿಲ್ಲವೆಂದರೂ, ಈ ನೆಲದ ಸತ್ಪ್ರಜೆಯಾಗಿ ನಾಡಿಗೆ ಕೀರ್ತಿ ತರುವ ಕಾರ್ಯ ಮಾಡಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭೆಯ ಹಿಂದಿರುವಂತಹ ಪೋಷಕರು, ತಮ್ಮ ಜೀವನದ ತೊಡಕುಗಳನ್ನು ನಿಭಾಯಿಸಿಕೊಂಡು ಉತ್ತಮವಾದ ಜೀವನ ಕಟ್ಟಿಕೊಟ್ಟಿದ್ದಾರೆ. ಅವರನ್ನು ಯಾವುದೋ ವೃದ್ದಾಶ್ರಮಕ್ಕೆ ದೂಡದೆ, ಉತ್ತಮ ಸಂಸ್ಕಾರವಂತರಾಗಿ, ತಂದೆ-ತಾಯಿಯನ್ನು, ಗುರು-ಹಿರಿಯರನ್ನು ಗೌರವದಿಂದ ಕಾಣಬೇಕು. ಮುಂದಿನ ದಿನಗಳಲ್ಲಿ ಯಾರ ಮೇಲೆಯೂ ಅವಲಬಿತರಾಗದೆ, ಸ್ವಾಭಿಮಾನದಿಂದ ಜೀವನ ರೂಪಿಸಿಕೊಂಡು, ಪೋಷಕರಿಗೆ, ಜಿಲ್ಲೆಗೆ, ತಾಲ್ಲೂಕಿಗೆ ಗೌರವ ತರುವಂತಹ ಕಾರ್ಯ ಮಾಡಬೇಕು ಎಂದರು.

ಸಂಘಟನೆಯ ಮೂಲಕ ನೌಕರರ ಸಮಸ್ಯೆಗಳನ್ನು ಸಂಪೂರ್ಣವಾಗಿ ಬಗೆಹರಿಸಲು ಸಾಧ್ಯವಿಲ್ಲವಾದರೂ, ಸಮಸ್ಯೆಗಳನ್ನು ಕಡಿಮೆ ಮಾಡಬಹುದು. ಅದರಂತೆಯೇ ಸಂಘದ ಮೂಲಕ ಸರ್ಕಾರಕ್ಕೆ ಶಿಫಾರಸ್ಸು ಮಾಡಿ, ಏಳನೇ ವೇತನ ಆಯೋಗ ಜಾರಿಗೆ ತರುವುದರ ಜೊತೆಗೆ ಇಲ್ಲಿಯವರೆಗೆ ಒಟ್ಟು 25 ಸರ್ಕಾರಿ ಆದೇಶಗಳನ್ನು ಜಾರಿಗೊಳಿಸುವಲ್ಲಿ ಯಶಸ್ವಿಯಾಗಿದ್ದೇವೆ. ಕಳೆದ 5 ವರ್ಷದಲ್ಲಿ ನೌಕರರು ಅತ್ಯಂತ ಸಂತೋಷ, ನೆಮ್ಮದಿಯಿಂದ ಜೀವನ ಸಾಗಿಸುವಂತಹ ವಾತಾವರಣ ನಿರ್ಮಾಣವಾಗಿದೆ ಎಂದರು. ಈ ಎಲ್ಲಾ ಕಾರ್ಯಕ್ರಮಗಳ ಅನುಷ್ಠಾನ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಇದೇ ಆಗಸ್ಟ್ 17ರಂದು ಸಂಘದ ವತಿಯಿಂದ ಸನ್ಮಾನಿಸಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮಾತನಾಡಿ, ಪ್ರಸ್ತುತ ದಿನಗಳಲ್ಲಿ ವ್ಯಕ್ತಿತ್ವ ಎಂಬುದು ತುಂಬಾ ಮುಖ್ಯ, ಆದರೆ ನಾವು ವಿಕಸನದ ಕಡೆಗೆ ಅಷ್ಟೇ ಯೋಚನೆ ಮಾಡ್ತಾ ಇದ್ದೇವೆ. ಸರ್ಕಾರಿ ನೌಕರರು ಮತ್ತೊಬ್ಬರಿಗೆ ಮಾದರಿಯಾಗಿರಬೇಕು. ನಮ್ಮ ನಡೆ, ನುಡಿಗಳಿಂದ ನಮ್ಮ ವ್ಯಕ್ತಿತ್ವ ಇಮ್ಮಡಿಗೊಳ್ಳಲು ಸಾಧ್ಯ. ನಮ್ಮ ಸಮಾಜ ಮತ್ತು ಮಕ್ಕಳು ನಮ್ಮನ್ನು ಗಮನಿಸುತ್ತಿದ್ದಾರೆ ಎಂಬ ಅರಿವನ್ನು ನಾವು ಹೊಂದಿರಬೇಕು. ಒಬ್ಬ ಸರ್ಕಾರಿ ನೌಕರನು ನಡೆ ನುಡಿಗಳಲ್ಲಿ ಮಾದರಿಯಾಗುವಂತಿರಬೇಕು. ಏಕಂದರೆ ಮಕ್ಕಳು ನಮ್ಮ ನಡೆ, ನುಡಿ, ಸಂಸ್ಕಾರವನ್ನು ನೋಡಿ ಹೆಚ್ಚು ಕಲಿಯುತ್ತಾರೆ. ಹಿಂದೆ ನಮಗೆ ಪಾಠ ಹೇಳಿಕೊಟ್ಟಂತಹ ಪ್ರಾಥಮಿಕ ಶಾಲೆಯ ಶಿಕ್ಷಕರು, ಅಂಗನವಾಡಿಯಲ್ಲಿ ಬೆರಳು ಹಿಡಿದು ತಿದ್ದಿದಂತಹವರು ಇಂದಿಗೂ ನೆನಪಿನಲ್ಲಿದ್ದಾರೆ. ಅಂತೆಯೇ ನಾವು ಸಮಾಜಕ್ಕೆ ಎಷ್ಟು ಒಳ್ಳೆಯ ಕೆಲಸಗಳನ್ನು ಮಾಡಿ, ಎಷ್ಟು ಜನರ ಮನಸ್ಸಿನಲ್ಲಿ ನಾವಿದ್ದೇವೆ ಎಂಬುದನ್ನು ತಿಳಿಯಬೇಕಿದೆ ಎಂದರು.

ಈ ಹಿಂದೆ ಎಸ್.ಎಸ್.ಎಲ್.ಸಿ, ಪಿಯುಸಿ, ಟಿ.ಸಿ.ಹೆಚ್. ಮುಗಿಸಿದವರು ಸರ್ಕಾರಿ ಕೆಲಸಕ್ಕೆ ಸೇರುತ್ತಿದ್ದರು. ಆದರೆ ಇಂದು ಪದವಿ ಪಡೆದವರೂ ಕೂಡ ಸರ್ಕಾರಿ ನೌಕರಿಗಾಗಿ ಹೆಚ್ಚು ಕಷ್ಟ ಪಡುವ ಸ್ಥಿತಿ ಇದೆ. ಹಿಂದೆ ಯಾವುದಾದರು ವಿಚಾರಗಳನ್ನು ತಿಳಿಯಬೇಕಾದರೆ ಪತ್ರಿಕೆಗಳಿಗೆ ಕಾಯಬೇಕಿತ್ತು, ಆದರೆ ಪ್ರಸ್ತುತ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಪಂಚದ ಯಾವುದೇ ಮೂಲೆಯ ವಿಚಾರಗಳು ಕೆಲವೇ ನಿಮಿಷಗಳಲ್ಲಿ ತಿಳಿಯಬಹುದಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ನೌಕರರು ಅತ್ಯಂತ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸುವ ಜೊತೆಗೆ, ಉತ್ತಮ ಸಂಸ್ಕಾರ, ಸನ್ನಡತೆಯನ್ನು ರೂಡಿಸಿಕೊಂಡು ಸಂಸ್ಕಾರವಂತರಾಗಿ ಬಾಳಬೇಕು ಎಂದರು.

ಕುಟುಂಬದಲ್ಲಿ ಹಾಗೂ ವೃತ್ತಿಯಲ್ಲಿ ಹೀಗೆ ಎರಡೂ ಕಡೆಗಳಿಂದ ಒತ್ತಡವನ್ನು ಸರಿಯಾದ ರೀತಿಯಲ್ಲಿ ನಿಭಾಯಿಸಿದಾಗ ಮಾತ್ರ ಜೀವನದ ಯಶಸ್ಸಿನ ಬಂಡಿಯನ್ನು ಸಾಗಿಸಲು ಸಾಧ್ಯ.ನಮ್ಮ ಕೌಟುಂಬಿಕ ಕಾರ್ಯ ಯೋಜನೆಗಳು ಇತಿಮಿತಿಯಲ್ಲಿರಬೇಕು. ಮತ್ತೊಬ್ಬರನ್ನು ನೋಡಿ ಅನುಕರಿಸಿ ಅನಪೇಕ್ಷಿತ ಆಸೆಗಳಿಗೆ ಬಲಿಯಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಬಾರದು. ಒಬ್ಬ ಜವಾಬ್ದಾರಿಯುತ ನೌಕರನಾಗಿ ಸರಿಯಾದ ಚೌಕಟ್ಟನ್ನು ಹಾಕಿಕೊಂಡು ಕಾರ್ಯನಿರ್ವಹಿಸಬೇಕಾಗಿದೆ. ಒತ್ತಡದ ಮುಕ್ತ ಜೀವನದಿಂದ ಹೊರಬಂದು, ಪ್ರಾಮಾಣಿಕವಾಗಿ, ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ ಸಾರ್ವಜನಿಕರ ಮೆಚ್ಚುಗೆಗೆ ನಾವೆಲ್ಲ ನೌಕರ ವರ್ಗದವರು ಪಾತ್ರರಾಗೋಣ.ನಾವು ಆರೋಗ್ಯವಾಗಿದ್ದರೆ ನಮ್ಮ ಕುಟುಂಬ ಆರೋಗ್ಯವಾಗಿರುತ್ತದೆ. ನಮ್ಮ ಕುಟುಂಬ ಆರೋಗ್ಯವಾಗಿದ್ದರೆ ಸಮಾಜ ಆರೋಗ್ಯವಾಗಿರುತ್ತದೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ ಸ್ವಾಗತಿಸಿದರು. ಜಿಲ್ಲಾ ಖಜಾಂಚಿ ವೀರೇಶ್ ಕಾರ್ಯಕ್ರಮ ನಿರೂಪಿಸಿದರು. ವ್ಯಕ್ತಿತ್ವ ವಿಕಸನ ತರಬೇತುದಾರ ಹೊಸದುರ್ಗದ ಹೆಚ್.ಎಸ್.ನವೀನ್ ಕುಮಾರ್ ಕಾರ್ಯಾಗಾರ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಖಜಾಂಚಿ ಸಿದ್ದರಾಮಣ್ಣ, ಹಿರಿಯ ಉಪಾಧ್ಯಕ್ಷ ಎಸ್.ಬಸವರಾಜ್, ಕಾರ್ಯದರ್ಶಿ ನೆಲ್ಕುದ್ರಿ ಸದಾನಂದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಆರ್. ಮಂಜುನಾಥ್, ಕ್ಷೇತ್ರ ಸಮನ್ವಯಾಧಿಕಾರಿ ಈ.ಸಂಪತ್ ಕುಮಾರ್, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಅಭಿನವ್ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮಳೆ ಕೊರತೆ ಕಾರಣ ಸಾವಿರಾರು ಎಕರೆ ಸಾವೆ ಬೆಳೆ ಕೈಕೊಟ್ಟ ಹಿನ್ನೆಲೆ: ಪರಿಹಾರಕ್ಕಾಗಿ ರೈತರ ಮನವಿ

» ಮೊದಲ ಪುಟದಿಂದ

ಆದರೆ, ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಬಹುತೇಕ ಸಾವೆ ಬೆಳೆ ಈಗಾಗಲೇ ಒಣಗಲಾರಂಭಿಸಿದ್ದು ಸಾವೆ ಬಿತ್ತನೆ ಮಾಡಿದ ರೈತರು ಈಗ ಕಂಗಾಲಾಗಿದ್ದಾರೆ.

ತಾಲ್ಲೂಕಿನ ಹುಲಿಕುಂಟೆ, ತೊರೆಬೀರನಹಳ್ಳಿ, ಜಡೇಕುಂಟೆ, ಕಾಪರಹಳ್ಳಿ, ಕಲಮರಹಳ್ಳಿ, ಬೆಳಗೆರೆ, ನಾರಾಯಣಪುರ, ಗೋಸಿಕೆರೆ ಗೊರ್ಲತ್ತು ಮುಂತಾದ ಕಡೆಗಳಲ್ಲಿ ಸುಮಾರು ಶೇ.73ರಷ್ಟು ರೈತರು ಸಾವೆಯನ್ನುಬಿತ್ತನೆ ಮಾಡಿದ್ದಾರೆ. ಆದರೆ, ಎಲ್ಲೂ ಸಹ ಉತ್ತಮ ಬೆಳೆಯಾಗಿಲ್ಲ. ರೈತರು ಬಿತ್ತನೆ ಮಾಡಿದ್ದ ಸಾವೆ ಈಗಾಗಲೇ ನೀರಿನ ಕೊರತೆಯಿಂದ ನೆಲಕಚ್ಚಿದೆ. ಸಾವಿರಾರು ರೂಪಾಯಿ ಖರ್ಚು ಮಾಡಿ ಸಾವೆ ಬೆಳೆಯನ್ನು ನಂಬಿದ್ದ ರೈತ ಈಗ ಬೀದಿಪಾಲಾಗುವ ಸ್ಥಿತಿ ಉಂಟಾಗಿದೆ. ಹುಲಿಕುಂಟೆ ಗ್ರಾಮದ ರೈತ ನಾಗರಾಜು ತನ್ನ 40 ಎಕರೆ ಜಮೀನಿನಲ್ಲಿ ಸುಮಾರು ನಾಲ್ಕು ಲಕ್ಷ ಹಣ ಖರ್ಚು ಮಾಡಿ ಸಾವೆ ಬಿತ್ತನೆ ಮಾಡಿದ್ದಾನೆ, ಅದೇ ಗ್ರಾಮದ ರೈತ ರಂಗಸ್ವಾಮಿ ಸುಮಾರು 2.50 ಲಕ್ಷ ವೆಚ್ಚ ಮಾಡಿ 31 ಎಕರೆಗೆ ಸಾವೆಯನ್ನು ಬಿತ್ತನೆ ಮಾಡಿದ್ದ, ಬನಜ್ಜರನಾಗರಾಜು-10 ಎಕರೆ ಸೇರಿದಂತೆ ನೂರಾರು ರೈತರು ಸಾವೆ ಬೆಳೆಯನ್ನು ಬಿತ್ತನೆ ಮಾಡಿ ಮಳೆಯ ಕೊರತೆಯಿಂದ ಈಗ ಕಂಗಾಲಾಗಿದ್ದಾರೆ. ಸರ್ಕಾರದಿಂದ ಬೆಳೆ ಪರಿಹಾರ ಪಡೆಯಬಹುದು ಎಂಬ ಚಿಂತನೆಯಲ್ಲಿದ್ದಾರೆ.

ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ರೈತ ಬಾಂಧವರಿಗೆ ಮಳೆ ಕಡಿಮೆಯಾದ ಹಿನ್ನೆಲೆಯಲ್ಲಿ ಪರ್ಯಾಯ ಬೆಳೆ ಬೆಳೆಯುವಂತೆ ಸಲಹೆ ನೀಡಲಾಗಿತ್ತು. ಸಿರಿಧಾನ್ಯಗಳಲ್ಲಿ ಒಂದಾದ ಸಾವೆಯನ್ನು ಹಲವಾರು ರೈತರು ಆಯ್ಕೆ ಮಾಡಿಕೊಂಡು ಬಿತ್ತನೆ ಮಾಡಿದ್ದಾರೆ. ಕೇವಲ ಮೂರು ತಿಂಗಳ ಅವಧಿಯ ಸಾವೆ ಬೆಳೆ ಬೆಳೆಯಬಹುದಾಗಿದೆ. ಆದರೆ, ಪ್ರಸ್ತುತ ವರ್ಷವೂ ವಾಡಿಕೆಗಿಂತ ಮಳೆ ಕಡಿಮೆಯಾಗಿದೆ. ಮೇ ತಿಂಗಳಲ್ಲಿ ಉತ್ತಮ ಮಳೆಯಾಗಿದ್ದು, ಜೂನ್ ತಿಂಗಳಲ್ಲಿ ಮಳೆ ಪೂರ್ಣಪ್ರಮಾಣದಲ್ಲಿ ನಿಂತಿದೆ. ಆದ್ದರಿಂದ ಹೆಚ್ಚಿನ ಪ್ರಮಾಣದಲ್ಲಿ ಸಾವೆ ಬೆಳೆಯಲು ಸಾಧ್ಯವಾಗಿಲ್ಲ. ಸರ್ಕಾರ ರೈತ ಸಿರಿ ಯೋಜನೆಯಲ್ಲಿ ಸಾವೆ ಬೆಳೆಗೆ ಪ್ರತಿ ಹೆಕ್ಟೇರ್ 10 ಸಾವಿರ, ಐದು ಎಕರೆಗೆ 20 ಸಾವಿರ ಪರಿಹಾರ ಧನ ನೀಡಲಿದೆ. ಆದ್ದರಿಂದ ರೈತರ ಸಿರಿಯೋಜನೆಯಲ್ಲಿ ರೈತರು ತಮ್ಮ ಬೆಳೆಯನ್ನು ಯಾಫ್ ಮೂಲಕ ದಾಖಲು ಮಾಡಿದರೆ ಅವರಿಗೆ ಪರಿಹಾರ ದೊರೆಯುವುದು ಎಂದು ತಿಳಿಸಿದ್ದಾರೆ.

## ನಿಸ್ವಾರ್ಥ ಸೇವಕ ಡಾ.ಉಮಾಪತಿಗೆ ಸನ್ಮಾನ

» ಹೊಳಲ್ಕೆರೆ



ಪಟ್ಟಣದ ಹೆಸರಾಂತ ವೈದ್ಯರಾದ ಡಾ.ಹೆಚ್.ಜಿ.ಉಮಾಪತಿ ಇವರ ನಾಗರಿಕ ಸೇವೆ ಪರಿಗಣಿಸಿದ ತಾಲೂಕಿನ ನಾಗರಿಕರು ಹಾಗೂ ವಿವಿಧ ಸಂಘಸಂಸ್ಥೆಗಳು ನಾಗರೀಕ ಸನ್ಮಾನ ಮತ್ತು ಅಭಿನಂದನಾ ಕಾರ್ಯಕ್ರಮವನ್ನು ಅಗಸ್ಟ 14 ಬುಧವಾರ ಪಟ್ಟಣದ ಸಂವಿಧಾನ ಸೌಧದಲ್ಲಿ ಹಮ್ಮಿಕೊಳ್ಳಲಾಗಿದೆ.

ವೈದ್ಯೋ ನಾರಾಯಣೋ ಹರೀಃ ಎನ್ನುವ ಹೆಸರಿಗೆ ತಕ್ಕಂತೆ ಕೇವಲ 10 ರೂ ಶುಲ್ಕಕ್ಕೆ ಆರೋಗ್ಯ ಸೇವೆ ಮತ್ತು ಚಿಕಿತ್ಸೆಗೆ ನೀಡುವ ಖ್ಯಾತಿಯ ಪಟ್ಟಣದ ಗಂಗಾಕ್ಲಿನಿಕ್ ಡಾ.ಹೆಚ್.ಜಿ.ಉಮಾಪತಿಯದು. ಕಳೆದ 30 ವರ್ಷಗಳಿಂದ ಜನರ ಆರೋಗ್ಯ ಸೇವಕರಾಗಿ ಸೇವೆ ಸಲ್ಲಿಸಿ ಸಾವಿರಾರು ಬಡ ಕುಟುಂಬಗಳ ಮನೆ ವೈದ್ಯರಾಗಿ ಮನೆ ಮಾತಾಗಿದ್ದಾರೆ.

ಹೊಳಲ್ಕೆರೆ ಕ್ಷೇತ್ರದ ಮಾಜಿ ಶಾಸಕ ಶ್ರೀಕಾವಲ್ ಸಿದ್ದರಾಮಪ್ಪ, ಶ್ರೀಮತಿ ಗಂಗಮ್ಮ 2ನೇ ಪುತ್ರ ಡಾ.ಹೆಚ್.ಜಿ.ಉಮಾಪತಿ. ದಾವಣಗೆರೆ ಜೆ.ಜೆ.ಎಂ ಮೆಡಿಕಲ್ ಕಾಲೇಜಿನಲ್ಲಿ ವೈದ್ಯಕೀಯ ಶಿಕ್ಷಣದ ಬಳಿಕ ಹಳ್ಳಿ ಜನ ಆರೋಗ್ಯ ಸೇವೆಯಿಂದ ಸಾರ್ಥಕ ಜೀವನದ ಕನಸು ಕಟ್ಟಿಕೊಂಡಿದ್ದರಿಂದ ವಿದೇಶಕ್ಕೆ ಹಾರುವ ಎಷ್ಟೂ ಅವಕಾಶಗಳನ್ನು ನಿರಾಕರಿಸಿ, ಹುಟ್ಟಿದ ನೆಲದಲ್ಲಿ ಸೇವೆ ಸಲ್ಲಿಸುವ ಉದ್ದೇಶದಿಂದ ತಾಯಿ ಹೆಸರಲ್ಲಿ ಗಂಗಾಕ್ಲಿನಿಕ್ ಆರಂಭಿಸಿ ಉಚಿತ ಸೇವೆ ಕೈಗೊಂಡರು.

ಅಪಾರ ಮನ್ನಣೆ ಜತೆ ಜನಪ್ರೀಯತೆಗಳಿಸಿದ್ದರೂ, ಬಿಡಿಗಾಸು ಶುಲ್ಕವಿಲ್ಲದೆ ಜನ ಸೇವೆ ಜನರ ಪ್ರೀತಿಗೆ ಅಪಾರವೇ ಇಲ್ಲದಂತಾಗಿತ್ತು. ನಮ್ಮದು ಉಚಿತ ಸೇವೆ, ಬಡವರಿಗಾಗಿ ಕ್ಲಿನಿಕ್ ತೆಗೆದಿದ್ದೇನೆ. ಹಣ ಇದ್ದವರು ಹಣ ತೆಗೆದುಕೊಳ್ಳುವ ವೈದ್ಯರ ಕಡೆಗೆ ಹೋಗಿ ಎನ್ನುವ ಸಂದೇಶ ನೀಡುತ್ತಿದ್ದರು. ಇದು ಜನರನ್ನು ಸಂಕಷ್ಟಕ್ಕೆ ತಳ್ಳಿತ್ತು. ವೈದ್ಯರಿಂದ ಉಚಿತ ಸೇವೆ ಪಡೆದುಕೊಳ್ಳುವುದು ಸರಿಯಲ್ಲ ಎನ್ನುವ ಕಾರಣಕ್ಕಾಗಿ ಒತ್ತಾಯ ಪೂರ್ವಕವಾಗಿ 10 ಶುಲ್ಕವನ್ನು ಅಭಿಮಾನಿಗಳು ನಿಗದಿ ಮಾಡಿದ್ದು, ವೈದ್ಯರ ಜನಪರ ಸೇವೆಗೆ ಸಾಕ್ಷ್ಯಿಯಾಗಿದೆ.

ಇವರ ನಿಸ್ವಾರ್ಥ ಸೇವೆಗೆ ಪ್ರೇರಣಾದಾಯಕ ಅಣ್ಣ ಪಟ್ಟಣ ಪಂಚಾಯ್ತಿ ಮಾಜಿ ಪ್ರಧಾನರಾದ ಹೆಚ್.ಜಿ.ಅನಂದ್, ಧರ್ಮಪತ್ನಿ ಸತ್ಯಭಾಮ, ಪುತ್ರ ದಂತ ವೈದ್ಯ ಡಾ.ಸಿದ್ದಾರ್ಥ,

## ಪ್ರಮುಖ ಸುದ್ದಿ

### ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಡಿ.ದೇವರಾಜ ಅರಸು ಜನ್ಮ ದಿನ: ವಿಜೃಂಭಣೆಯ ಆಚರಣೆ

» ಚಿತ್ರದುರ್ಗ



ಹಿಂದುಳಿದ ವರ್ಗಗಳ ಆಶಾಕಿರಣ ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರ 109ನೇ ಜನ್ಮ ದಿನಾಚರಣೆಯನ್ನು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಡಿ. ದೇವರಾಜ ಅರಸು ರವರ 109ನೇ ಜನ್ಮ ದಿನಾಚರಣೆಯ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ದಿ: ಡಿ.ದೇವರಾಜ ಅರಸು ರವರ ದೂರದೃಷ್ಠಿ ಹಾಗೂ ಹಿಂದುಳಿದ ವರ್ಗಗಳ ಏಳಿಗೆ ಬಗ್ಗೆ ಅವರಿಗಿದ್ದ ಬದ್ಧತೆಯನ್ನು ನಾವು ಸ್ಮರಿಸಬೇಕಿದೆ. ಈ ಹಿನ್ನೆಲೆಯಲ್ಲಿ ಅತ್ಯಂತ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಜಯಂತಿಯನ್ನು ಆಚರಿಸುವ ನಿಟ್ಟಿನಲ್ಲಿ ಸಕಲ ಸಿದ್ದತೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.ಡಿ.ದೇವರಾಜ ಅರಸುರವರ 109ನೇ ಜನ್ಮ ದಿನಾಚರಣೆಯ ಅಂಗವಾಗಿ ಆಗಸ್ಟ್ 20ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇಗುಲ ಬಳಿಯಿಂದ ವಿವಿಧ ಕಲಾತಂಡಗಳೊಂದಿಗೆ ಡಿ.ದೇವರಾಜು ಅರಸು ಅವರ ಭಾವಚಿತ್ರದೊಂದಿಗೆ ನಗರದ ತರಾಸು ರಂಗಮಂದಿರದವರೆಗೆ ಅದ್ದೂರಿ ಮೆರವಣಿಗೆ ನಡೆಸಲಾಗುವುದು. ನಂತರ ಬೆಳಿಗ್ಗೆ 11ಕ್ಕೆ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಜಯಂತಿ ಅಂಗವಾಗಿ ಡಿ.ದೇವರಾಜು ಅರಸು ಅವರ ಜೀವನ ಸಾಧನೆ, ವ್ಯಕ್ತಿತ್ವ, ಕೊಡುಗೆ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಏರ್ಪಡಿಸಬೇಕು. ಜತೆಗೆ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಆಯೋಜಿಸಬೇಕು ಎಂದು ತಿಳಿಸಿದ ಅವರು, ತಾಲ್ಲೂಕು ಮಟ್ಟದಲ್ಲಿಯೂ ಸಹ ಅರ್ಥಪೂರ್ಣವಾಗಿ ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆ ಆಚರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸುಬ್ರಾನಾಯ್ಕ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ವಿವಿಧ ಸಮುದಾಯಗಳ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಆ. 15 ರಂದು ಜಿಲ್ಲಾ ಕೇಂದ್ರದಲ್ಲಿ ಸ್ವಾತಂತ್ರ್ಯ ದಿನಾಚರಣೆ

» **ಚಿತ್ರದುರ್ಗ**

ಭಾರತದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭ ಆ. 15 ರಂದು ಬೆಳಿಗ್ಗೆ 09 ಗಂಟೆಗೆ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಜರುಗಲಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಅಂದು ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು. ಸಂಸದ ಗೋವಿಂದ ಎಂ. ಕಾರಜೋಳ ಅವರ ಘನ ಉಪಸ್ಥಿತಿಯಲ್ಲಿ ಜರುಗುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ವಹಿಸುವರು. ಕಾರ್ಯಕ್ರಮದಲ್ಲಿ ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಸೇರಿದಂತೆ ವಿವಿಧ ಗಣ್ಯರು ಗೌರವಾನ್ವಿತ ಅತಿಥಿಗಳಾಗಿ ಪಾಲ್ಗೊಳ್ಳುವರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯಾಗಿರುವ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂಧರ್ ಕುಮಾರ್ ಮೀನಾ ಅವರು ಸಮಾರಂಭದಲ್ಲಿ ಭಾಗವಹಿಸುವರು. ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಅಂದು ಸಂಜೆ 06 ಗಂಟೆಗೆ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಹಾಗೂ ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ತ.ರಾ.ಸು. ರಂಗಮಂದಿರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

### 24ರಂದು ಬಿ.ಕಾಂ ಪರೀಕ್ಷೆ

» **ದಾವಣಗೆರೆ**

ತಾಂತ್ರಿಕ ಕಾರಣಗಳಿಂದ ಮುಂದೂಡಲಾಗಿದ್ದ ಸ್ನಾತಕ ಬಿ.ಕಾಂ (ಎನ್‌ಇಪಿ) ಪದವಿಯ ಇ-ಕಾಮರ್ಸ್ ವಿಷಯದ ಪರೀಕ್ಷೆಯನ್ನು ಆಗಸ್ಟ್ 24 ರಂದು ಬೆಳಿಗ್ಗೆ 10 ರಿಂದ 12 ಗಂಟೆ ವರೆಗೆ ನಡೆಸಲಾಗುವುದು ಎಂದು ದಾವಣಗೆರೆ ವಿಶ್ವವಿದ್ಯಾನಿಲಯ ಪರೀಕ್ಷಾಂಗ ಕುಲಸಚಿವ ಪ್ರೊ.ಸಿ.ಕೆ.ರಮೇಶ್ ತಿಳಿಸಿದ್ದಾರೆ.

### ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ಮಾರಾಟ ನಿಷೇಧ

» **ದಾವಣಗೆರೆ**

ಗಣೇಶ ಚತುರ್ಥಿ ಅಂಗವಾಗಿ ಮಲೇಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾರಾಟ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹಾಗೂ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ವಶಪಡಿಸಿಕೊಳ್ಳಲಾಗುವುದು ಎಂದು ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ರಂಗೋಲಿ ಸ್ಪರ್ಧೆ

» **ದಾವಣಗೆರೆ**

ಹರ್‌ಘರ್ ತಿರಂಗಾ ಕಾರ್ಯಕ್ರಮದ ಅಂಗವಾಗಿ ನಗರದ ಗ್ಲಾಸ್ ಹೌಸ್ ಆವರಣದಲ್ಲಿ ಆ.14 ರಂದು ಮಧ್ಯಾಹ್ನ 3 ಗಂಟೆಗೆ ಹರ್ ಘರ್ ತಿರಂಗಾ ರಂಗೋಲಿ ಸ್ಪರ್ಧೆ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್ ತಿಳಿಸಿದ್ದಾರೆ.

### ಹರ್ ಘರ್ ತಿರಂಗಾ

» **ದಾವಣಗೆರೆ**

ಹರ್ ಘರ್ ತಿಂರಂಗಾ ಕಾರ್ಯಕ್ರಮದ ಅಂಗವಾಗಿ ದಾವಣಗೆರೆ ನಗರದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಜಿಲ್ಲಾಡಳಿತ ಭವನದವರೆಗೆ ಆಗಸ್ಟ್ 13 ರಂದು ಮಧ್ಯಾಹ್ನ 2 ರಿಂದ 3 ಗಂಟರವರೆಗೆ ಹರ್ ಘರ್ ತಿರಂಗಾ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಕುಮಾರ್ ತಿಳಿಸಿದ್ದಾರೆ.

### ಲೋಕಾ ಅಧೀಕ್ಷಕರಿಂದ ಅಹವಾಲು ಸ್ವೀಕಾರ

» **ದಾವಣಗೆರೆ**

ದಾವಣಗೆರೆ ಲೋಕಾಯುಕ್ತ ವಿಭಾಗದ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ದಾವಣಗೆರೆ ನಗರದ ಪ್ರವಾಸಿ ಮಂದಿರದಲ್ಲಿ ಆ.14 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಸಾರ್ವಜನಿಕರ ಅಹವಾಲು ಸ್ವೀಕರಿಸಿ ನಂತರ ಭ್ರಷ್ಟಾಚಾರ ನಿರೋಧಕ ಕಾಯ್ದೆ ಹಾಗೂ ಕರ್ನಾಟಕ ಲೋಕಯುಕ್ತ ಕಾಯ್ದೆ ಬಗ್ಗೆ ಸೂಕ್ತ ಅರಿವು ನೀಡಲಾಗುವುದು.

# ಗಂಜಿಗುಂಟೆ ನಿವೇಶನರಹಿತ ಕುಟುಂಬಗಳ ಮುಷ್ಕರ: ಶಾಸಕ ಭರವಸೆ ಮೇರೆಗೆ ವಾಪಸ್

» **ಚಳ್ಳಕೆರೆ**



ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಜಿಗುಂಟೆ ಗ್ರಾಮದ ಹರಿಜನ ಕುಟುಂಬಗಳು ಗ್ರಾಮದ ಸರ್ಕಾರಿ ಗೋಮಾಳದಲ್ಲಿ ನಿವೇಶನ ರಹಿತರಿಗೆ ನಿವೇಶನ, ಹಕ್ಕು ಪತ್ರ ಸಹಿತ ನೀಡುವಂತೆ ಅಲ್ಲಿರುವ ಒತ್ತುವರಿ ತೆರವುಗೊಳಿಸುವಂತೆ ಒತ್ತಾಯಿಸಿ ಆ.7ರಿಂದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಭಾನುವಾರಕ್ಕೆ ಪ್ರತಿಭಟನೆ ಐದನೇ ದಿನಕ್ಕೆ ಕಾಲಿಟ್ಟಿದೆ. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮುಷ್ಕರನಿರತ ನಿವೇಶನರೊಂದಿಗೆ ಸೌಹಾರ್ದಿತವಾಗಿ ಚರ್ಚಿಸಿ ಶೀಘ್ರದಲ್ಲೇ ತಹಶೀಲ್ದಾರ್ ನೇತೃತ್ವದಲ್ಲಿ ಅರ್ಜಿಗಳನ್ನು ಆಹ್ವಾನಿಸಿ ನಿಯಮಗಳ ಪ್ರಕಾರ ನಿವೇಶನ ನೀಡುವ ಭರವಸೆ ನೀಡಿದ ನಂತರ ಮುಷ್ಕರವನ್ನು ಸ್ಥಗಿತಗೊಳಿಸಲಾಯಿತು.

ಗ್ರಾಮದ ಮುಖಂಡ ಎನ್.ನಿಜಲಿಂಗಪ್ಪ ಮಾತನಾಡಿ, ಗ್ರಾಮದ ರಿಸರ್ವೆನಂ 105ರಲ್ಲಿ ಸುಮಾರು ಐದು ಎಕರೆ ಸರ್ಕಾರಿಗೋಮಾಳವಿದ್ದು ಅಲ್ಲಿ ನಮ್ಮೆಲ್ಲ ಕುಟುಂಬಗಳು ತಾತ್ಕಾಲಿಕವಾಗಿ ಕಳೆದ 35 ವರ್ಷಗಳಿಂದ ವಾಸುತ್ತಿವೆ. ಹಲವಾರುಬಾರಿ ಪ್ರತಿಭಟನೆ ನಡೆಸಿದ್ದು, ಅಧಿಕಾರಿಗಳ ಭರವಸೆ ಮೇರೆಗೆ ಮುಷ್ಕರ ಕೈಬಿಡಲಾಗುತ್ತಿತ್ತು. ಇತ್ತೀಚೆಗೆ ಗ್ರಾಮದ ಕೆಲಪಟ್ಟಭದ್ರಶಕ್ತಿಗಳು ಸದರಿ ಪ್ರದೇಶವನ್ನು ಅಕ್ರಮಿಸಿಕೊಂಡಿದ್ದಾರೆ. ಇದರಿಂದ ನೂರಾರು ಹರಿಜನ ಕುಟುಂಬಗಳು ಸೂರಿಲ್ಲದೆ ಬೀದಿಗೆ ಬರುವ ಸ್ಥಿತಿ ಉಂಟಾಗಿದೆ. ಆದ್ದರಿಂದ ಮುಷ್ಕರ ನಡೆಸುತ್ತಿದ್ದೇವೆ. ಆದರೆ, ಶಾಸಕರು ಇಂದು ನಮ್ಮ ಪ್ರತಿಭಟನಕಾರರನ್ನು ಭೇಟಿ ಮಾಡಿ ಅಧಿಕಾರಿಗಳಿಗೆ ನಿರ್ದಿಷ್ಟ ಸೂಚನೆ ನೀಡಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರಸ್ವಾಮಿ ಸಹ ಭರವಸೆ ನೀಡಿದ್ದಾರೆ, ಶಾಸಕರ ಭರವಸೆ ಮೇರೆಗೆ ಮುಷ್ಕರ ನಿರತ ಎಲ್ಲರೂ ಮುಷ್ಕರವನ್ನು ನಿಲ್ಲಿಸಲು ತೀರ್ಮಾನಕೈಗೊಂಡಿದ್ದೇವೆಂದರು. ಶಾಸಕರು ನಮಗೆ ಭರವಸೆ ನೀಡಿದಂತೆ ಆದಷ್ಟುಬೇಗ ಸಮೀಕ್ಷೆ ನಡೆಸಿ ನಿವೇಶನ ನೀಡುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು.

ತಹಶೀಲ್ದಾರ್‌ರೇಹಾನ್‌ಪಾಷ,ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಗ್ರಾಮದಮುಖಂಡರಾದ ಎನ್.ಮಹಲಿಂಗಪ್ಪ, ಆರ್.ರಂಗನಾಥ, ಎನ್.ಶ್ರೀನಿವಾಸ್, ಆರ್.ರಮೇಶ್, ಕೆ.ಪ್ರಹ್ಲಾದ, ಎನ್.ಹರೀಶ್, ದೇವಿರಮ್ಮ, ಕರಿಯಮ್ಮ, ಜಯಮ್ಮ, ಕಮಲಮ್ಮ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಶಶಿಧರ, ಕೃಷ್ಣ,ಆರ್.ಭದ್ರಿ,ಭೀಮನಕೆರೆಶಿವಮೂರ್ತಿ, ತಳಕು ಕಂದಾಯಾಧಿಕಾರಿ ಲಿಂಗೇಗೌಡ, ಕಸಬಾ ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮಲೆಕ್ಕಿಗ ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

**ಕಮರದ ಕಾಡಿನ ಮಧ್ಯೆ ವಿಶೇಷ ನಾಗರಪಂಚಮಿ**

## ನಾಗರಪಂಚಮಿ ಹಬ್ಬದಲ್ಲಿ ಹುಣಸೆಹುಳಿ ಘಮ

» **ಚಳ್ಳಕೆರೆ**



ಚಿತ್ರದುರ್ಗ ಜಿಲ್ಲೆ ಬುಡಕಟ್ಟು ಆಚರಣೆಗಳ ತವರು. ಆಧುನಿಕ ಕಾಲಘಟ್ಟದಲ್ಲೂ ಕಾಡುಗೊಲ್ಲ ಸಮುದಾಯದ ಎರಡನೇ ಶ್ರಾವಣ ಸೋಮವಾರ ವಿಶೇಷ ನಾಗರಪಂಚಮಿ ಆಚರಣೆ ತಮ್ಮ ಸಂಸ್ಕೃತಿಯನ್ನ ಅನಾವರಣಗೊಳ್ಳಿಸುತ್ತದೆ.

ಸಾಮಾನ್ಯವಾಗಿ ನಾಗರಪಂಚಮಿ ಎಂದಾಕ್ಷಣ ನಾಗರಕ್ಕೆ ಹಾಲೆರೆಯುವುದು ಸಾಮಾನ್ಯ. ಆದರೆ, ಕಾಟಪ್ಪನಹಟ್ಟಿಯ ಕಾಡುಗೊಲ್ಲ ಸಮುದಾಯ ನಾಗರಪಂಚಮಿಯಂದು ಹುಣಸೆಹುಳಿ, ಅನ್ನವನ್ನು ನೈವೈದ್ಯ ಮಾಡುವುದು ವಿಶೇಷ. ಕಾಟಪ್ಪನಹಟ್ಟಿ ಗೊಲ್ಲರಹಟ್ಟಿಯಲ್ಲಿ ನೆಲೆಸಿದ ಕಾಡುಗೊಲ್ಲ ಸಮುದಾಯದ ಮಳ್ಳಿಗ ವಂಶಸ್ಥರು ವಿಶೇಷ ನಾಗರಪಂಚಮಿ ಹಬ್ಬ ಅನಾದಿಕಾಲದಿಂದಲ್ಲೂ ಆಚರಣೆ ಮಾಡುತ್ತಾ ಬಂದಿದ್ದಾರೆ. ತಾಲ್ಲೂಕಿನ ಪರಶುರಾಮಪುರ ಹೋಬಳಿಯ ದೊಡ್ಡಚೆಲ್ಲೂರು ಕಮರದ ಅರಣ್ಯ ಪ್ರದೇಶದಲ್ಲಿರುವ ಪುರಾತನ ನಾಗರಕಲ್ಲು, ಹುತ್ತಕ್ಕೆ ಅನ್ನ, ಹುಣಸೆಹುಳಿಯಿಂದ ತಯಾರಾದ ಸಾಂಬರನ್ನು ನೈವೇದ್ಯ ಮಾಡುತ್ತಾರೆ. ಶ್ರಾವಣ ಮಾಸದ ಎರಡನೇ ಸೋಮವಾರ ಉಪವಾಸದಿಂದಲೇ ಕಟ್ಟುನಿಟ್ಟಿನ ವ್ರತದೊಂದಿಗೆ ನಗರದ ಎತ್ತಪ್ಪ, ರಂಗನಾಥಸ್ವಾಮಿ ದೇವಾಲಯದಿಂದ ಕಾಲ್ನಡಿಗೆಯಲ್ಲಿ ಸುಮಾರು 37 ಕಿ.ಮೀ ದೂರವಿರುವ ಕಮರದ ಅರಣ್ಯ ಪ್ರದೇಶಕ್ಕೆ ಹೋಗುತ್ತಾರೆ. ಅಲ್ಲಿಯ ನಾಗರಕಲ್ಲುಗಳಿಗೆ ಬೀಟೆ, ಕಮರ ಸೊಪ್ಪು, ಹೂಗಳಿಂದ ನಾಗರಕಲ್ಲು, ಹುತ್ತವನ್ನು ಅಲಂಕಾರ ಮಾಡಿ ಪೂಜೆ ಸಲ್ಲಿಸುವುದು ಪ್ರತೀತಿ. ಹರಕೆಗಳನ್ನು ಮಾಡಿಕೊಂಡು ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ಬೇಡಿಕೊಳ್ಳುತ್ತಾರೆ. ಕಂಕಣ ಭಾಗ್ಯ, ಸಂತಾನ, ಉದ್ಯೋಗ, ವ್ಯಾಪಾರ ಹೀಗೆ ಅನೇಕ ಬೇಡಿಕೆಗಳನ್ನು ಬೇಡಿಕೊಳ್ಳುತ್ತಾರೆ. ಬೇಡಿಕೆ ಈಡೇರಿದ ನಂತರ ಬೆಳ್ಳಿ ಆಭರಣ, ಅನ್ನ ಸಂತರ್ಪಣೆ, ತಲೆಕೂದಲು (ಮುಡಿ) ಕೊಡುವ ಮೂಲಕ ಬೇಡಿಕೆ ತಿರಿಸುತ್ತಾರೆ. ವಂಶಸ್ಥರು, ನೆಂಟರು, ನವವಿವಾಹಿತರು ಪೂಜೆಯಲ್ಲಿ ಭಾಗವಹಿಸಿ ಪ್ರಸಾದ ಸ್ವೀಕರಿಸುತ್ತಾರೆ.



ಗೌಡರ ಚಿಕ್ಕಣ್ಣ, ರಾಜಣ್ಣ, ರಂಗನಾಥ, ಅಜ್ಜಯ್ಯ, ಮಂಜುನಾಥ, ವೀರಭದ್ರಪ್ಪ, ತಿಪ್ಪೇಸ್ವಾಮಿ, ಪೂಜಾರಿ ಸುರೇಶ, ದಾಸಪ್ಪರಾದ ರಂಗಸ್ವಾಮಿ, ವೀರೇಶ್, ತಿಪ್ಪೇಸ್ವಾಮಿ ನೂರಾರು ಭಕ್ತರು ಭಾಗವಹಿಸಿದ್ದರು.

## ಡೆಂಗ್ಯೂ ಹಾಟ್‌ಸ್ಪಾಟ್ ವಾರ್ಡ್ ಮನೆಗೆ ಲಾರ್ವಾಹಾರಿ ಮೀನು ವಿತರಣೆ



» **ಚಿತ್ರದುರ್ಗ**

ಚಿತ್ರದುರ್ಗ ನಗರ ಕೇಳಗೋಟೆಯ ತಿಪ್ಪೇರುದ್ರಸ್ವಾಮಿ ಮಠ ಹಿಂಭಾಗ ವ್ಯಾಪ್ತಿಯಲ್ಲಿ ಡೆಂಗ್ಯೂ ಪ್ರಕರಣಗಳು ವರದಿಯಾಗಿರುವುದರಿಂದ ಪ್ರತಿ ಮನೆ ಮನೆಗಳಿಗೆ ತೊಟ್ಟಿ, ಡ್ರಮ್ ಸೇರಿದಂತೆ ನೀರು ಸಂಗ್ರಹಾರಗಳಿಗೆ ಸೋಮವಾರ ಲಾರ್ವಹಾರಿ ಮೀನು ಗಪ್ಪಿ ಮತ್ತು ಗಾಂಬ್ಯುಸಿಯ ಬಿಡಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ರೋಗವಾಹಕ ಆಶಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಕಾಶಿ, ಜನರು ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಮನೆಯ ಒಳಗೆ ಹೊರಗೆ ಘನತ್ಯಾಜ್ಯಗಳಾದ ಒಡೆದ ಪ್ಲಾಸ್ಟಿಕ್, ಮಡಕೆ, ತೆಂಗಿನಕಾಯಿ ಚಿಪ್ಪು ಕಾಲಿ ಟೈರ್ ಸರಿಯಾದ ಜಾಗದಲ್ಲಿ ವಿಲೇವಾರಿ ಮಾಡಿ, ಹೂವಿನ ಕುಂಡಗಳಲ್ಲಿ ನೀರು ಸದಾಕಾಲ ನಿಲ್ಲದಂತೆ ನೋಡಿಕೊಳ್ಳಿ ಎಂದು ಸಲಹೆ ನೀಡಿದರು. ಮನೆಯ ನೀರಿನ ಸಂಗ್ರಹ ಪರಿಕರಗಳನ್ನು ಪ್ರತಿ ಶುಕ್ರವಾರ ಚನ್ನಾಗಿ ತೊಳೆದು ಒಣಗಿಸಿ ನೀರು ಸಂಗ್ರಹಿಸಿ ಮುಚ್ಚಳ ಮುಚ್ಚಿ. ಮನೆಯಲ್ಲಿ ಫ್ರಿಜ್ ಬಳಸುವವರು ನೀರು ಸಂಗ್ರಹವಾಗುವ ಟ್ರೆ ಸರಿಯಾಗಿ ಸ್ವಚ್ಛ ಮಾಡಿ. ಜಾಗೃತಿಯೇ ಡೆಂಗ್ಯೂ ರೋಗಕ್ಕೆ ಮದ್ದು ಎಂದರು.

ಜಿಲ್ಲಾ ಕೀಟಶಾಸ್ತ್ರಜ್ಞರಾದ ನಂದಿನಿ ಕಡಿ ಮಾತನಾಡಿ, ಡೆಂಗ್ಯೂ ಹಾಟ್‌ಸ್ಪಾಟ್ ವಾರ್ಡ್ 29 ರಲ್ಲಿ ಪ್ರತಿ 100 ಮನೆಗಳಲ್ಲಿ 10 ಮನೆಯಲ್ಲಿ ಲಾರ್ವಾ ಕಂಡು ಬಂದಿದ್ದು, ಲಾರ್ವಾ ಸಾಂದ್ರತೆ ಶೇಕಡಾ ಶೇ.10 ರಷ್ಟು ಇರುತ್ತದೆ. ಸೊಳ್ಳೆಗಳ ತಾಣ ನಾಶ ಮಾಡಲು ಗಪ್ಪಿ ಗಂಬೂಷಿಯ ಲಾರ್ವಾ ಹಾರಿ ಮೀನು ಬಿಡುಗಡೆ ಮಾಡುತ್ತಿದ್ದೇವೆ. ಈ ಮೀನುಗಳು ನಾವು ತಿನ್ನಲು ಬರುವುದಿಲ್ಲ ನೀರಿನ ತೊಟ್ಟಿಯಲ್ಲಿ ಬಿಟ್ಟರೆ ಸೊಳ್ಳೆಗಳ ನಿಯಂತ್ರಣ ಸಾಧ್ಯ. ಲಾರ್ವಾ ಹಂತದಲ್ಲಿ ತಿಂದು ಹಾಕುವುದರಿಂದ ಸೊಳ್ಳೆಗಳ ಉತ್ಪತ್ತಿ ಕಡಿಮೆಯಾಗುತ್ತದೆ. ಸೊಳ್ಳೆಗಳಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮೇಲ್ವಿಚಾರಕರಾದ ಸುರೇಶ್ ಬಾಬು, ಶ್ರೀನಿವಾಸ್ ಮಲ್ಲಿಕಾರ್ಜುನ್, ನಾಗರಾಜ್, ಕಾವ್ಯ, ಆಶಾ ಕಾರ್ಯಕರ್ತೆಯರು ಇದ್ದರು.

## ಬಾಲ್ಯ ವಿವಾಹ ಕುರಿತು ವಿಶೇಷ ಜಾಗೃತಿ

**ಚಿತ್ರದುರ್ಗ:** ಚಿತ್ರದುರ್ಗ ಸರ್ಕಾರಿ ಶಿಕ್ಷಕರ ಶಿಕ್ಷಣ ತರಬೇತಿ ಮಹಾವಿದ್ಯಾಲಯದಲ್ಲಿ ಸೋಮವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿರುವ ನೂರು ದಿನಗಳ ವಿಶೇಷ ಜಾಗೃತಿ ಅಭಿಯಾನದಡಿ ಮಹಿಳಾ ಮತ್ತು ಮಕ್ಕಳ ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಯಿತು. ಜಿಲ್ಲಾ ಮಿಷನ್ ಸಂಯೋಜಕ ಬಿ.ವಿನಯ್ ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಶಿಕ್ಷಕರ ಪಾತ್ರ ಮಹತ್ವವಾದದ್ದು. ಬಾಲ್ಯ ವಿವಾಹ ನಡೆಯುವುದು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಕರೆ ಮಾಡುವಂತೆ ತಿಳಿಸಿದರು.



**ಪ್ರಮುಖ ಸುದ್ದಿ**

**ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿಕೆ**

## ವಿಪತ್ತು ನಿರ್ವಹಣೆಗೆ ಪ್ರಾಯೋಗಿಕ ತರಬೇತಿ ಅವಶ್ಯಕ

» **ಚಿತ್ರದುರ್ಗ**



ವಿಪತ್ತು ಯಾವಾಗ ಸಂಭವಿಸುತ್ತವೆ ಎಂದು ಯಾರೂ ಕೂಡ ಅಂದಾಜಿಸುವುದು ಕಷ್ಟ ಸಾಧ್ಯ. ವಿಪತ್ತಿನ ಸಂದರ್ಭದಲ್ಲಿ ಅದನ್ನು ಸಮರ್ಥವಾಗಿ ಎದುರಿಸಿ ಉತ್ತಮವಾಗಿ ನಿರ್ವಹಣೆ ಮಾಡಲು ಪ್ರಾಯೋಗಿಕ ತರಬೇತಿ ಪಡೆಯುವುದು ಅವಶ್ಯಕವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ, ಜಿಲ್ಲಾ ವಿಪತ್ತು ನಿರ್ವಹಣಾಪ್ರಾಧಿಕಾರಹಾಗೂಭಾರತೀಯ ರೆಡ್ ಕ್ರಾಸ್ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ ವಿಪತ್ತು ನಿರ್ವಹಣೆ ಮತ್ತು ಪ್ರಥಮ ಚಿಕಿತ್ಸಾ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ನೈಸರ್ಗಿಕ ವಿಕೋಪಗಳು ಸಂಭವಿಸುವುದು ಅಪರೂಪ, ಆದರೂ ಮಾನವ ನಿರ್ಮಿತ ಸಣ್ಣ ವಿಪತ್ತುಗಳು ಎದುರಾಗುತ್ತವೆ. 2010 ರಲ್ಲಿ ಎಂ.ಕೆ.ಹಟ್ಟಿ ಕೆರೆ ತುಂಬಿ ನೀರು ಹೊರ ಹರಿದಾಗ ಸಮೀಪದ ಜನ ಪ್ರದೇಶಕ್ಕೆ ನೀರು ನುಗ್ಗಿ ಮೂರ್‍ನಾಲು ಕಾಲೋನಿಗಳ ಜನರಿಗೆ ತೊಂದರೆ ಉಂಟಾಗಿತ್ತು. ಈ ಸಮಯದಲ್ಲಿ ಅಗ್ನಿಶಾಮಕ ಇಲಾಖೆಯಿಂದ ಬೋಟುಗಳ ಮೂಲಕ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಯಿತು. ಗಂಜಿಕೇಂದ್ರಗಳನ್ನು ತೆರೆದು ತಾತ್ಕಾಲಿಕವಾಗಿ ಆಶ್ರಯ ನೀಡಲಾಯಿತು. ಘಟನೆಯ ನಂತರ ತಡೆಗೋಡೆ ನಿರ್ಮಿಸಿ ಶಾಶ್ವತವಾಗಿ ನೀರು ನುಗ್ಗದ ಹಾಗೆ ಕ್ರಮ ಕೈಗೊಳ್ಳಲಾಗಿದೆ. ಇಂತಹ ಸಂದರ್ಭದಲ್ಲಿ ಸ್ಥಳೀಯ ಅಧಿಕಾರಿಗಳಿಗೆ ಅವುಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವ ಕ್ರಮ ತಿಳಿಯದಿದ್ದರೆ, ಸಣ್ಣಪುಟ್ಟ ವಿಪತ್ತುಗಳಲ್ಲಿ ಸಹ ಜೀವ ಹಾನಿ ಉಂಟಾಗುವ ಸಂಭವ ಇರುತ್ತದೆ. ಜಿಲ್ಲೆಯಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ದೊಡ್ಡ ಮಟ್ಟದ ಅಪಘಾತಗಳು ಸಂಭವಿಸಿವೆ. ಕೆಲ ಗ್ರಾಮಗಳಲ್ಲಿ ಕಲುಷಿತ ನೀರಿನಿಂದ ಗ್ರಾಮಸ್ಥರು ಅಸ್ವಸ್ಥಗೊಂಡ ಘಟನೆಗಳು ಜರುಗಿವೆ. ಇವುಗಳನ್ನು ಸರಿಯಾದರೀತಿಯಲ್ಲಿನಿರ್ವಹಿಸಿಸಾರ್ವಜನಿಕರಿಗೆ ಮನೋಸ್ಥೈರ್ಯ ತುಂಬುವುದು ಅವಶ್ಯಕವಾಗಿರುತ್ತವೆ ಎಂದರು.

ರಾಷ್ಟ್ರ ಮಟ್ಟದ ವಿಪತ್ತು ನಿರ್ವಹಣೆ ಹಾಗೂ ಪ್ರಥಮ ಚಿಕಿತ್ಸೆ ತರಬೇತುದಾರ ಡಾ.ಕುಮಾರ್.ವಿ.ಎಲ್.ಎಸ್ ಮಾತನಾಡಿ ನೈಸರ್ಗಿಕ, ಮಾನವ ನಿರ್ಮಿತ ವಿಪತ್ತುಗಳನ್ನು ಎದುರಿಸುವ ಸಂದರ್ಭದಲ್ಲಿ ತರಬೇತಿ ಹೊಂದಿದ ಸ್ವಯಂ ಸೇವಕರ ಅವಶ್ಯಕತೆ ಹೆಚ್ಚಾಗಿ ಇರುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಭೂಕಂಪ, ನೆರೆ ಹಾಗೂ ಚಂಡಮಾರುತಗಳಂತ ವಿಪತ್ತುಗಳಿಗಿಂತಲೂ, ಅಪಘಾತ, ಸಾಂಕ್ರಾಮಿಕ ರೋಗ, ಕಲುಷಿತ ನೀರು ಹಾಗೂ ಆಹಾರ ಸೇವನೆಯಿಂದ ಉಂಟಾಗುವ ಸಣ್ಣ ಪುಟ್ಟ ವಿಪತ್ತುಗಳು ಹೆಚ್ಚಾಗಿ ಘಟಿಸುತ್ತವೆ. ಇವುಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸುವುದು ಅತಿ ಮುಖ್ಯವಾಗಿರುತ್ತವೆ. ಗಣಿ ಕಂಪನಿಗಳು ಜಿಲ್ಲೆಯ ಹಲವು ಸ್ಥಳಗಳಲ್ಲಿ ಗಣಿಗಾರಿಕೆ ನಡೆಸುತ್ತಿವೆ. ಇಲ್ಲಿಯೂ ವಿಪತ್ತು ಘಟಿಸುವ ಸಂಭವನೀಯತೆ ಇರುತ್ತದೆ. ದೊಡ್ಡ ಪ್ರಮಾಣದಲ್ಲಿ ರಸ್ತೆ ಹಾಗೂ ರೈಲ್ವೇ ದುರಂತಗಳು ಸಂಭವಿಸುವ ಅವಕಾಶಗಳು ಕೂಡ ಇವೆ. ಬೃಹತ್ ಕೈಗಾರಿಕೆಗಳಲ್ಲಿ ಬಳಸುವ ವಿಷ ಅನಿಲಗಳು ಸಹ ಸೋರಿಕೆಯಾಗಿ ಜನರ ಪ್ರಾಣಕ್ಕೆ ಕುತ್ತು ಒದಗಬಹುದು. ಇಂತಹ ಸಂದರ್ಭದಲ್ಲಿ ವಿಪತ್ತು ನಿರ್ವಹಣೆಗೆ ತರಬೇತಿ ಪಡೆದ ಸ್ವಯಂ ಸೇವಕರನ್ನು ಬಳಸಿಕೊಳ್ಳಬಹುದು. ಇದಕ್ಕಾಗಿ ಜಿಲ್ಲಾ ಮಟ್ಟದಲ್ಲಿ ತರಬೇತಿ ಹೊಂದಿದ ಸ್ವಯಂ ಸೇವಕರ ಮಾಹಿತಿಯನ್ನು ಸಂಗ್ರಹಿಸಿಡಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದರು. ಕೋವಿಡ್ ಸಾಂಕ್ರಾಮಿಕದ ನಂತರ ದೇಶದಲ್ಲಿ ಆರೋಗ್ಯ ವ್ಯವಸ್ಥೆಯನ್ನು ಬಲಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಆಕ್ಸಿಜನ್ ತಯಾರಿಕೆ ಸೇರಿದಂತೆ ನುರಿತ ತಂತ್ರಜ್ಞರ ನೇಮಕಕ್ಕೆ ಒತ್ತು ನೀಡಲಾಗಿದೆ. ಅಪಘಾತ ಸಂದರ್ಭಲ್ಲಿ ಸರಿಯಾದ ಪ್ರಥಮ ಚಿಕಿತ್ಸೆ ವ್ಯಕ್ತಿಯ ಪ್ರಾಣ ಉಳಿಸುತ್ತದೆ. ದೇಶದಲ್ಲಿ ವಾರ್ಷಿಕವಾಗಿ ಸರಾಸರಿ ಸುಮಾರು 4 ಲಕ್ಷ ಜನರು ಅಪಘಾತ ಹಾಗೂ ಹೃದಯಾಘಾತದಂತ ಘಟನೆಯಲ್ಲಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಪ್ರಥಮ ಚಿಕಿತ್ಸೆ ಕ್ರಮಗಳನ್ನು ಪ್ರತಿಯೊಬ್ಬರು ತಿಳಿದುಕೊಂಡರೆ, ತುರ್ತು ಸಂದರ್ಭಗಳಲ್ಲಿ ಅಮೂಲ್ಯ ಜೀವಗಳನ್ನು ಕಾಪಾಡಬಹುದು ಎಂದು ಡಾ.ಕುಮಾರ್.ವಿ.ಎಲ್.ಎಸ್ ಹೇಳಿದರು.

# ತೃತೀಯ ಲಿಂಗಿಗಳ ಸಬಲೀಕರಣಕ್ಕೆ ಕ್ರಾಂತಿಕಾರಿ ಹೆಜ್ಜೆಗಳು





ಮಾನವನ ಏಳಿಗೆಯು ನಿರಂತರವಾದುದು, ದಿನದಿಂದ ದಿನಕ್ಕೆ ಅಭಿವೃದ್ಧಿಯನ್ನು ಹೊಂದುತ್ತಿರುತ್ತಾನೆ. ಆತನ ಪ್ರಗತಿಗೆ ಅನೇಕ ಅಂಶಗಳು ಕಾರಣವಾಗುತ್ತವೆ. ಹಾಗೆಯೇ ತೃತೀಯಲಿಂಗಿಗಳ ಅಭಿವೃದ್ಧಿಯಲ್ಲೆ ಸರ್ವರ ಅಭಿವೃದ್ಧಿಯನ್ನು ಕಾಣಬಹುದು. ತೃತೀಯ ಲಿಂಗಿಗಳ ಬದುಕು, ಅವರ ಜೀವನವೇ ಒಂದು ಸವಾಲಿದ್ದಂತೆ, ಅವರು ಅನುಭವಿಸುತ್ತಿರುವ ಕಷ್ಟ-ನಷ್ಟ, ನೋವು-ನಲಿವು ವರ್ಣಿಸಲಸಾಧ್ಯ. ತೃತೀಯ ಲಿಂಗಿಗಳ ಬದುಕು ಅವಲಂಬಿತವಾಗಿರುವುದು ಸರ್ಕಾರಿ ಕಲ್ಯಾಣ ಕಾರ್ಯಕ್ರಮಗಳು ಮತ್ತುಅವುಗಳ ಪರಿಣಾಮಕಾರಿ ಅನುಷ್ಠಾನದಿಂದ. ತೃತೀಯಲಿಂಗಿ ಎಂದರೆ ಹೆಣ್ಣು ಅಲ್ಲದ ಗಂಡು ಅಲ್ಲದ ಒಂದು ಮನಸ್ಥಿತಿ. ಭಾರತದ ಜನಗಣತಿ 2011ರ ಪ್ರಕಾರ ನಮ್ಮದೇಶದಲ್ಲಿ ಸುಮಾರು 4.88ಲಕ್ಷ ಮತ್ತುಕರ್ನಾಟಕದಲ್ಲಿ ಸುಮಾರು 22,000 ತೃತೀಯಲಿಂಗಿಗಳ ಜನಸಂಖ್ಯೆ ಇರುವುದಾಗಿ ಸರ್ಕಾರದ ಅಂಕಿ ಅಂಶಗಳಿಂದ ತಿಳಿದುಬರುತ್ತದೆ. ಪ್ರಸ್ತುತ ಸನ್ನಿವೇಶದಲ್ಲಿ ತೃತೀಯಲಿಂಗಿಗಳು ಇತರರಿಗೆ ಹೋಲಿಸಿದ್ದಲ್ಲಿ ಸರ್ಕಾರಿ ಕಲ್ಯಾಣ ಕಾರ್ಯಕ್ರಮಗಳ ಸಂಪೂರ್ಣ ಲಾಭ ಪಡೆಯುವಲ್ಲಿ ತುಂಬಾ ಹಿಂದುಳಿದಿದ್ದಾರೆ ಎಂಬುದು ನಮಗೆ ಅಂಕಿಅಂಶಗಳಿಂದ ತಿಳಿದುಬರುತ್ತದೆ.

ತೃತೀಯ ಲಿಂಗಿಗಳ ಬಗ್ಗೆ ರಾಮಾಯಣ ಮತ್ತು ಮಹಾಭಾರತದಲ್ಲಿ ಉಲ್ಲೇಖಗಳಿರುವುದನ್ನು

ಗಮನಿಸಬಹುದಾದರೂ ತೀರಾ ಇತ್ತೀಚಿನ ದಿನಗಳವರೆಗೂ ಈ ಸಮುದಾಯಕ್ಕೆ ಸಂವಿಧಾನದಲ್ಲಿ ಪುರುಷ, ಮಹಿಳೆ ಅಥವಾ ಇತರೇ ಯಾವುದೇ ನಿರ್ದಿಷ್ಟ ಲಿಂಗದ ಸ್ಥಾನಮಾನದ ಕೊರತೆಯ ಕಾರಣದಿಂದ ತೃತೀಯ ಲಿಂಗಿಗಳ ಕಲ್ಯಾಣಕ್ಕಾಗಿ ಸರ್ಕಾರಗಳು ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸುವಲ್ಲಿ ವಿಫಲವಾಗಿವೆ. ಈ ಕಾರಣಗಳಿಂದಾಗಿ ಈ ಸಮುದಾಯವು ಹಲವು ಶೋಷಣೆಗಳನ್ನು ಅನುಭವಿಸುತ್ತ ಅಳಿವಿನಂಚಿನಲ್ಲಿರುವ ಮತ್ತು ಬಹಿಷ್ಕಾರ ಹೊಂದಿರುವ ಸಮಾಜ ಎನ್ನುವ ಹಣೆಪಟ್ಟಿಯೊಂದಿಗೆ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಮತ್ತು ಔದ್ಯೋಗಿಕ ಕ್ಷೇತ್ರಗಳಲ್ಲಿ ಅಭಿವೃದ್ಧಿ ಎನ್ನುವುದು ಮರೀಚಿಕೆಯಾಗಿದೆ. ಹಲವು ಸಂಘರ್ಷಗಳ, ಸಮಾನ ಮನಸ್ಕರ ಹೋರಾಟದ ಫಲವಾಗಿ ಸುಪ್ರೀಂಕೋರ್ಟ್ 2014ರಲ್ಲಿ ಈ ಸಮುದಾಯವನ್ನು 'ತೃತೀಯ ಲಿಂಗಿ'ಗಳೆಂದು ಮಾನ್ಯತೆಯನ್ನು ನೀಡಿದ ಕಾರಣ, ಇಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅವರ ಅಭಿವೃದ್ಧಿಗೆ ಹಲವಾರು ನೀತಿ-ನಿಯಮಗಳನ್ನು ರೂಪಿಸಿವೆ. ತೃತೀಯ ಲಿಂಗಿಗಳ ಜೀವನ ಮಟ್ಟ ಸುಧಾರಿಸಲು 'ಸರ್ವರಿಗೂ ಸಮಪಾಲು-ಸರ್ವರಿಗೂ ಸಮಬಾಳು' ಎಂಬ ಬಸವಣ್ಣನವರ ಆಶಯದಂತೆ ಸಮಾಜದ ಸಂಪನ್ಮೂಲಗಳ ಸಮಾನ ಹಂಚಿಕೆ ಮತ್ತು ಇತರರೊಂದಿಗೆ ಸಮಾನತೆ-ಸಾಮರಸ್ಯದೊಂದಿಗೆ ನೆಮ್ಮದಿಯಿಂದ ಬದುಕುವಂತಾಗಲು ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಮಾಡಿವೆ. ಅವುಗಳೆಂದರೆ

- **ಆಯುಷ್ಮಾನ್ ಭಾರತ್ ಟಿಜಿ ಪ್ಲಸ್ ಯೋಜನೆ**
- **ತೃತೀಯಲಿಂಗಿ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ನಿಯಮಗಳು-2020**
- **ತೃತೀಯ ಲಿಂಗಿಗಳಿಗೆ ಆಶ್ರಯ ಮನೆ (ಗರಿಮಾಗ್ರೆಹ್)ಯೋಜನೆ**
- **ತೃತೀಯ ಲಿಂಗಿಯ ವ್ಯಕ್ತಿಗಳಿಗಾಗಿ ರಾಷ್ಟ್ರೀಯ ಪೋರ್ಟಲ್**
- **ತೃತಿಯ ಲಿಂಗಿ ವ್ಯಕ್ತಿಗಳ ರಾಷ್ಟ್ರೀಯ ಮಂಡಳಿ(ಎನ್‌ಸಿಟಿ)**
- **ಸ್ಮೈಲ್ ಯೋಜನೆ**
- **ಕೌನ್ಸಲಿಂಗ್ ಸೇವೆಗಳ ಸಹಾಯವಾಣಿ**
- **ಮನಸ್ವಿನಿ ಯೋಜನೆ**
- **ಕರ್ನಾಟಕ ರಾಜ್ಯ ತೃತೀಯ ಲಿಂಗಿಗಳ ನೀತಿ 2017**

## 1 ಆಯುಷ್ಮಾನ್ ಭಾರತ್ ಟಿಜಿ ಪ್ಲಸ್ ಯೋಜನೆ https://transgender.dosje.gov.in/

ಈ ಯೋಜನೆಯು ವಿಶ್ವದ ಅತಿದೊಡ್ಡ ಆರೋಗ್ಯ ಯೋಜನೆಗಳಲ್ಲಿ ಒಂದಾಗಿದೆ. ಆಯುಷ್ಮಾನ್ ಭಾರತ್ ಟಿಜಿ ಪ್ಲಸ್ ಯೋಜನೆಯು ಭಾರತದಲ್ಲಿನ ತೃತೀಯಲಿಂಗಿ ಸಮುದಾಯದವರಿಗೆ ಆರೋಗ್ಯ ರಕ್ಷಣೆಗೆ ವಾರ್ಷಿಕ 5 ಲಕ್ಷ ರೂ ಆರೋಗ್ಯ ವಿಮಾಸೌಲಭ್ಯ ಯೋಜನೆಯಾಗಿದೆ. ಈ ಯೋಜನೆಯಡಿ ತೃತೀಯ ಲಿಂಗಿಗಳು ಭಾರತದ ಯಾವುದೇ ಭಾಗದಲ್ಲಿ ಯೋಜನೆಯ ಲಾಭ ಪಡೆಯಬಹುದು ಮತ್ತು ಈ ಯೋಜನೆಯಡಿ ಒಳಗೊಂಡಿರುವ ಫಲಾನುಭವಿಗೆ ಭಾರತದಾದ್ಯಂತ ಖಾಸಗಿ/ಸಾರ್ವಜನಿಕ ಆಸ್ಪತ್ರೆಗಳಿಂದ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತದೆ.

### ಪ್ರಯೋಜನಗಳು

- **ಈ ಯೋಜನೆಯು ಭಾರತದಲ್ಲಿ ಸುಮಾರು 40% ದುರ್ಬಲ ಮತ್ತು ನಿರ್ಗತಿಕ ಕುಟುಂಬಗಳಿಗೆ ವಿಮೆ ನೀಡುತ್ತದೆ. ಪಿಎಮ್‌ಜೆಎವೈ ಅಡಿಯಲ್ಲಿ ಚಿಕಿತ್ಸೆ ಮತ್ತುಆರೋಗ್ಯ ಸೌಲಭ್ಯಗಳು ಉಚಿತವಾಗಿವೆ.**
- **ಆಯುಷ್ಮಾನ್ ಭಾರತ್ ಟಿಜಿ ಪ್ಲಸ್ ಯೋಜನೆಯು 25 ವಿಶೇಷ ವಿಭಾಗಗಳನ್ನು ಹೊಂದಿದೆ ಮತ್ತುಇದು ನರಶಸ್ತ್ರಚಿಕಿತ್ಸೆ, ಹೃದ್ರೋಗ ಇತ್ಯಾದಿಗಳಂತಹ 1,354 ವೈದ್ಯಕೀಯ ಮತ್ತು ಶಸ್ತ್ರಚಿಕಿತ್ಸೆ ಪ್ಯಾಕೇಜ್‌ಗಳ ವ್ಯಾಪಕ ಶ್ರೇಣಿಯನ್ನು ಹೊಂದಿದೆ.**
- **50 ವಿವಿಧ ರೀತಿಯ ಕ್ಯಾನ್ಸರ್‌ಗಳಿಗೆ ಕೀಮೋ ಥೆರಪಿಯೊಂದಿಗೆ ಆಂಕೊಲಾಜಿಯ ಚಿಕಿತ್ಸೆಯ ವೆಚ್ಚವನ್ನು ಸಹಒಳಗೊಂಡಿದೆ.**
- **ಆದಾಗ್ಯೂ ವೈದ್ಯಕೀಯ ಮತ್ತು ಶಸ್ತ್ರ ಚಿಕಿತ್ಸಾ ಪ್ಯಾಕೇಜ್ ಎರಡನ್ನೂ ಒಂದೇ ಸಮಯದಲ್ಲಿ ಪಡೆಯಲಾಗುವುದಿಲ್ಲ.**

## 2 ತೃತೀಯ ಲಿಂಗಿ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ನಿಯಮಗಳು-2020

ಈ ಕಾಯಿದೆಯು 10ನೇ ಜನವರಿ 2020 ರಂದು ಜಾರಿಗೆ ಬಂದಿತು. ಇದು ತೃತೀಯ ಲಿಂಗಿಗಳ ಕಲ್ಯಾಣವನ್ನು ಖಾತ್ರಿ ಪಡಿಸುವ ಪ್ರಥಮ ಮಹತ್ವದ ಹೆಜ್ಜೆಯಾಗಿದೆ. ಈ ನಿಯಮಗಳು ತೃತೀಯ ಲಿಂಗಿಗಳ ಗುರುತನ್ನು ಗುರುತಿಸಲು ಮತ್ತು ಶಿಕ್ಷಣ, ಉದ್ಯೋಗ, ಆರೋಗ್ಯ, ಆಸ್ತಿಯನ್ನು ಹಿಡಿದಿಟ್ಟುಕೊಳ್ಳುವುದು ಅಥವಾ ವಿಲೇವಾರಿ ಮಾಡುವುದು, ಸಾರ್ವಜನಿಕ ಸೇವೆಗಳು ಮತ್ತು ಪ್ರಯೋಜನಗಳ ಪ್ರವೇಶ ಮತ್ತು ಬಳಕೆ ಕ್ಷೇತ್ರಗಳಲ್ಲಿ ತಾರತಮ್ಯವನ್ನು ನಿಷೇಧಿಸಲು ಪ್ರಯತ್ನಿಸುತ್ತದೆ. ಟ್ರಾನ್ಸ್‌ಮೆನ್ ಮತ್ತು ಟ್ರಾನ್ಸ್‌ಮಹಿಳೆಯರನ್ನು ಸೇರಿಸಲು 'ಅಂತರ್ಲಿಂಗ ವ್ಯತ್ಯಾಸ ಹೊಂದಿರುವ ವ್ಯಕ್ತಿ' ಮತ್ತು 'ಟ್ರಾನ್ಸ್ಜಂಡರ್ ವ್ಯಕ್ತಿ' ಎಂಬ ವ್ಯಾಖ್ಯಾನಗಳನ್ನು ಒದಗಿಸಲಾಗಿದೆ (ಅಂತಹ ವ್ಯಕ್ತಿಯು ಲೈಂಗಿಕ ಪುನರ್ವಿತರಣೆ ಶಸ್ತ್ರಚಿಕಿತ್ಸೆ, ಹಾರ್ಮೋನ್ ಅಥವಾ ಇತರ ಚಿಕಿತ್ಸೆಗೆ ಒಳಗಾಗಿದ್ದರೂ ಅಥವಾ ಇಲ್ಲವೇ). ಶಿಕ್ಷಣ ಸಂಸ್ಥೆಗಳಲ್ಲಿ ಉದ್ಯೋಗ ಅಥವಾ ಔದ್ಯೋಗಿಕ ಅವಕಾಶಗಳು, ಆರೋಗ್ಯ ಸೇವೆಗಳು ಮತ್ತು ಸಾರ್ವಜನಿಕ ಸೌಲಭ್ಯಗಳು ಮತ್ತು ಪ್ರಯೋಜನಗಳಿಗೆ ಪ್ರವೇಶದಲ್ಲಿ ತೃತೀಯ ಲಿಂಗಿಗಳಿಗೆ ಆಗುವ ತಾರತಮ್ಯವನ್ನು ಇದು ನಿಷೇಧಿಸುತ್ತದೆ. ಇದು ತೃತೀಯ ಲಿಂಗಿಗಳಿಗೆ ಚಲನೆಗೆ, ವಾಸಿಸುವ, ಬಾಡಿಗೆಗೆ ಅಥವಾ ಆಸ್ತಿಯನ್ನು ಆಕ್ರಮಿಸಿಕೊಳ್ಳುವ ಹಕ್ಕನ್ನು ಮತ್ತಷ್ಟು ಬಲಪಡಿಸುತ್ತದೆ. ಕಾನೂನಿನ ಅಡಿಯಲ್ಲಿ ಸೂಚಿಸದಂತೆ ಕೆಲವು ನಿರ್ದಿಷ್ಟ ಮಾಹಿತಿಯೊಂದಿಗೆ ತೃತೀಯ ಲಿಂಗಿಗಳಿಗೆ ಸಮಾನ ಅವಕಾಶ ನೀತಿಯನ್ನು ರೂಪಿಸಲು ಕಡ್ಡಾಯಗೊಳಿಸಲಾಗಿದೆ. ಈ ನಿಯ ಮವು ಅಂತರ್ಗತ ಶಿಕ್ಷಣ ನೀಡಲು ಸಹಾಯ ಮಾಡುತ್ತದೆ. ಶೌಚಾಲಯಗಳು, ಆಸ್ಪತ್ರೆಗಳಲ್ಲಿ ಪ್ರತ್ಯೇಕ ಮೂಲಸೌಕರ್ಯ ಸೌಲಭ್ಯಗಳನ್ನು ಕಲ್ಪಿಸಲು ಪ್ರೋತ್ಸಾಹಿಸುತ್ತದೆ. ಈ ನಿಯಮವು ಯಾವುದೇ ವೈದ್ಯಕೀಯ ಅಥವಾ ದೈಹಿಕ ಪರೀಕ್ಷೆಯ ಅಗತ್ಯವಿಲ್ಲದೆಯೇ ತೃತೀಯ ಲಿಂಗ ಪ್ರಮಾಣ ಪತ್ರವನ್ನು ನೀಡಲು ಜಿಲ್ಲಾ ಮ್ಯಾಜಿಸ್ಟ್ರೇಟ್‌ಗೆ ಅವಕಾಶ ನೀಡುತ್ತದೆ.

## 3 ತೃತೀಯ ಲಿಂಗಿಗಳಿಗೆ ಆಶ್ರಯ ಮನೆ (ಗರಿಮಾ ಗ್ರಹ್) ಯೋಜನೆ

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ತೃತೀಯ ಲಿಂಗಿಯ ವ್ಯಕ್ತಿಗಳ ಕಲ್ಯಾಣಕ್ಕಾಗಿ ತೃತೀಯ ಲಿಂಗಿಗಳಿಗೆ ಆಶ್ರಯ ಮನೆ (ಗರಿಮಾ ಗ್ರಹ್) ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಲ್ಲಿ ನಿರ್ಗತಿಕ ತೃತೀಯ ಲಿಂಗಿಗಳಿಗೆ ಆಶ್ರಯ ಮನೆಗಳನ್ನು ಸ್ಥಾಪಿಸುವುದು ಈ ಯೋಜನೆಯ ಉದ್ದೇಶವಾಗಿದೆ. ತೃತೀಯ ಲಿಂಗಿಗಳಿಗೆ ಆಶ್ರಯ ಮನೆ (ಗರಿಮಾ ಗ್ರಹ್) ಯೋಜನೆ ಅಗತ್ಯ ಆಶ್ರಯ ಮನೆಗಳನ್ನು ನೀಡುವುದರ ಜೊತೆಗೆ ಆಹಾರ, ವೈದ್ಯಕೀಯ ಆರೈಕೆ ಮತ್ತು ಮನರಂಜನಾ ಸೌಲಭ್ಯಗಳಂತಹ ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತದೆ.

## 4 ತೃತೀಯಲಿಂಗಿಯವ್ಯಕ್ತಿಗಳಿಗಾಗಿ ರಾಷ್ಟ್ರೀಯ ಪೋರ್ಟಲ್ https://transgender.dosje.gov.in/

2020ರ ತೃತೀಯ ಲಿಂಗಿಯ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ನಿಯಮಗಳಿಗೆ ಅನುಗುಣವಾಗಿ ಇದನ್ನು ಪ್ರಾರಂಭಿಸಲಾಗಿದೆ. ಇದು ದೇಶದ ಎಲ್ಲಿಂದಲಾದರು ಪ್ರಮಾಣಪತ್ರಮತ್ತುಗುರುತಿನಚೀಟಿಗಾಗಿಡಿಜಿಟಲ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುತ್ತದೆ. ಈ ಕಾರಣದಿಂದಾಗಿ ಈ ಸಮುದಾಯದವರು ಅನಾವಶ್ಯಕ ಕಛೇರಿ, ಅಧಿಕಾರಿಗನ್ನು ಭೇಟಿಮಾಡುವ ಸಮಯ ಮತ್ತು ಹಣ ಉಳಿತಾಯವಾಗುತ್ತದೆ. ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಖಾತ್ರಿಪಡಿಸುವ ಅರ್ಜಿ, ನಿರಾಕರಣೆ ಕುಂದುಕೊರತೆ, ಪರಿಹಾರ ಇತ್ಯಾದಿಗಳ ಸ್ಥಿತಿಯನ್ನು ಕಂಡುಹಿಡಿಯಲು ಸಹಾಯ ಮಾಡುತ್ತದೆ ಅರ್ಜಿಗಳನ್ನು ಪ್ರಕ್ರಿಯೆಗೊಳಿಸಲು ಮತ್ತು ಯಾವುದೇ ಅಗತ್ಯ ವಿಳಂಬವಿಲ್ಲದೆ ಪ್ರಮಾಣ ಪತ್ರಗಳು ಮತ್ತು ಐ□ಕಾರ್ಡ್‌ಗಳನ್ನು ವಿತರಿಸಲು ಅಧಿಕಾರಿಗಳು ಕಟ್ಟುನಿಟ್ಟಾದ ಕಾಲಮಿತಿ ಅನುಸರಿಸಬೇಕಾಗುತ್ತದೆ.

ಸಹಾಯವಾಣಿ-01120893988

## 5 ಸ್ಮೈಲ್‌ಯೋಜನೆ (SMILE-Support for Marginalized Individuals for Livelihood and Enterprise)

ಜೀವನ ಮತ್ತು ಉದ್ಯಮಕ್ಕಾಗಿ ಅಂಚಿನಲ್ಲಿರುವ ವ್ಯಕ್ತಿಗಳಿಗೆ ಬೆಂಬಲ(ಸ್ಮೈಲ್)ಎಂಬ ಹೆಸರಿನ ಸಮಗ್ರ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿದೆ. ಜೀವನೋಪಾಯ ಮತ್ತು ಉದ್ಯಮಕ್ಕಾಗಿ ಅಂಚಿನಲ್ಲಿರುವ ವ್ಯಕ್ತಿಗಳಿಗೆ ಬೆಂಬಲ ಯೋಜನೆಯು ಪುನರ್ವಸತಿ, ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವುದು, ಸಮಾಲೋಚನೆ, ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ತೃತೀಯಲಿಂಗಿ ವ್ಯಕ್ತಿಗಳ ಆರ್ಥಿಕ ಸಂಪರ್ಕಗಳ ಮೇಲೆ ಕೇಂದ್ರೀಕರಿಸುತ್ತದೆ. ಈ ಯೋಜನೆಯಿಂದ ತೃತೀಯ ಲಿಂಗಿಯ ವಿದ್ಯಾರ್ಥಿಗಳು 9ನೆ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವಿದ್ಯಾರ್ಥಿವೇತನ ಪಡೆಯಬಹುದು. ಭಿಕ್ಷಾಟನೆ, ನಿರ್ಗತಿಕರಿಗೆ ರಕ್ಷಣೆ, ಶೋಷಣೆಯಿಂದ ಮುಕ್ತಿ ನೀಡುವ ಕಾರ್ಯ ಈ ಯೋಜನೆ ಒಳಗೊಂಡಿದೆ. https://transgender.dosje.gov.in/

## 6 ತೃತಿಯ ಲಿಂಗಿ ವ್ಯಕ್ತಿಗಳ ರಾಷ್ಟ್ರೀಯ ಮಂಡಳಿ (ಎನ್‌ಸಿಟಿ)

ತೃತಿಯಲಿಂಗಿ ವ್ಯಕ್ತಿಗಳ ರಾಷ್ಟ್ರೀಯ ಮಂಡಳಿ(ಎನ್‌ಸಿಟಿ)ಯು ಸಂವಿಧಾನನೀತಿಗಳ ರಚನೆ, ಮೇಲ್ವಿಚಾರಣೆ ಮತ್ತು ಮಂಗಳ ಮುಖಿಯರ ಕುಂದು ಕೊರತೆಗಳ ಪರಿಹಾರದ ಕುರಿತು ಸರ್ಕಾರಕ್ಕೆ ಸಲಹೆ ನೀಡುತ್ತದೆ. ಬಲವಂತದ ದುಡಿಮೆಯಲ್ಲಿ ತೃತೀಯ ಲಿಂಗದವರನ್ನು ತೊಡಗಿಸಿಕೊಳ್ಳುವುದು, ಸಾರ್ವಜನಿಕ ಸ್ಥಳಗಳಿಗೆ ಪ್ರವೇಶವನ್ನು ನಿರಾಕರಿಸುವುದು ಕಾನೂನಿನ ರೀತಿ ಶಿಕ್ಷಾರ್ಹ ಅಪರಾಧವಾಗುತ್ತದೆ. ತೃತೀಯ ಲಿಂಗದವರ ಮೇಲೆ ದೈಹಿಕ, ಭಾವನಾತ್ಮಕ ಮತ್ತು ಲೈಂಗಿಕ ದೌರ್ಜನ್ಯದಂತಹ ಅಪರಾಧ ಮಾಡಿದವರಿಗೆ ತೃತಿಯಲಿಂಗಿ ವ್ಯಕ್ತಿಗಳ ಕಾಯಿದೆಯ ನಿಬಂಧನೆಗಳ ಅಡಿಯಲ್ಲಿ ಕನಿಷ್ಠ 6 ತಿಂಗಳ ಅವಧಿಯವರಿಗೆ ಜೈಲುಶಿಕ್ಷೆ ಮತ್ತು ದಂಡದೊಂದಿಗೆ ಎರಡು ವರ್ಷಗಳವರೆಗೆ ವಿಸ್ತರಿಸಲಾಗುತ್ತದೆ. ತೃತೀಯ ಲಿಂಗಿಯ ವ್ಯಕ್ತಿಗಳಿಗಾಗಿ ಕಾರ್ಯನಿರ್ವಹಿಸುವ ಇತರ ಇಲಾಖೆಗಳ ಕಾರ್ಯಕ್ಷಮತೆಯನ್ನು ಪರಿಕ್ಷಿಸುತ್ತದೆ ಮತ್ತು ಮಾರ್ಗೋಪಾಯಗಳನ್ನು ತಿಳಿಸುತ್ತದೆ. ತೃತಿಯ ಲಿಂಗಿ ವ್ಯಕ್ತಿಗಳ ರಾಷ್ಟ್ರೀಯ ಮಂಡಳಿ(ಎನ್‌ಸಿಟಿ) ತೃತಿಯ ಲಿಂಗಿ ವ್ಯಕ್ತಿಗಳ ಸಮಸ್ಯೆಗಳನ್ನು ಪರಿಹರಿಸಿ ಮುಖ್ಯವಾಹಿನಿಗೆ ತರಲು ಹಲವು ಕಾರ್ಯಕ್ರಮಗಳನ್ನು ರೂಪಿಸುತ್ತದೆ. ಎನ್‌ಸಿಟಿಯು ರಾಜ್ಯದ ತೃತಿಯ ಲಿಂಗಿ ವ್ಯಕ್ತಿಗಳ ಕಲ್ಯಾಣ ಮಂಡಳಿಗಳು ಆಹಾರ, ವಸತಿ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ತೃತಿಯ ಲಿಂಗಿ ವ್ಯಕ್ತಿಗಳಿಗೆ ತಲುಪಿಸಲು ಮಾಡುತ್ತಿರುವ ಪರಿಣಾಮಕಾರಿತ್ವದ ಬಗ್ಗೆ ಗಮನಹರಿಸುತ್ತದೆ. ಇ-MAIL - tghelp@mail.inflibnet.ac.in

## 7 ಕರ್ನಾಟಕ ರಾಜ್ಯತೃತೀಯ ಲಿಂಗಿಗಳ ನೀತಿ 2017

ಕರ್ನಾಟಕ ರಾಜ್ಯ ಸರ್ಕಾರವು 2017 ರಲ್ಲಿ ತೃತೀಯ ಲಿಂಗಿಗಳ ಕುರಿತು ವಿವರವಾದ ಕರ್ನಾಟಕ ರಾಜ್ಯ ನೀತಿಯನ್ನು ರಚಿಸಿದೆ ಮತ್ತು ಪ್ರಕಟಿಸಿದೆ. ಸುಪ್ರೀಂಕೋರ್ಟ್ ಈ ನೀತಿಯನ್ನು ಅಂಗೀಕರಿಸುವುದರ ಜೊತೆಗೆ ಈ ಸಮುದಾಯ ಎದುರಿಸುತ್ತಿರುವ ತಾರತಮ್ಯವನ್ನು ಮತ್ತು ವಿವಿಧ ಕ್ರಿಮಿನಲ್/ಸಿವಿಲ್ ಕಾನೂನುಗಳಲ್ಲಿ ಅವರ ಮನ್ನಣೆಯ ಕೊರತೆಯನ್ನು ಗುರುತಿಸುತ್ತದೆ. ತೃತೀಯ ಲಿಂಗಿ ವ್ಯಕ್ತಿಗಳನ್ನು ಸಬಲೀಕರಣಗೊಳಿಸುವುದು ಮತ್ತು ಅವರ ಮೂಲಭೂತಹಕ್ಕುಗಳನ್ನು ರಕ್ಷಿಸುವುದು ಈ ನೀತಿಯ ಉದ್ದೇಶವಾಗಿದೆ. ಇದು ಸರ್ಕಾರದ ಎಲ್ಲಾ ಇಲಾಖೆಗಳ ತಮ್ಮ ಕಾರ್ಯಕ್ರಮಗಳು ಮತ್ತು ಯೋಜನೆಗಳಲ್ಲಿ ತೃತೀಯ ಲಿಂಗಿಗಳ ಅಭಿವೃದ್ಧಿಗೆ ಸಂಬಂಧಿಸಿದ ಅಂಶಗಳನ್ನು ಸೇರಿಸಲು ಈ ನೀತಿಯು ಪ್ರೋತ್ಸಾಹಿಸುತ್ತದೆ. ಈ ನೀತಿಯು ಆರೋಗ್ಯ, ಶಿಕ್ಷಣ, ವಸತಿ ಮತ್ತು ಉದ್ಯೋಗ ಇತ್ಯಾದಿ ಕ್ಷೇತ್ರಗಳನ್ನು ಒಳಗೊಳ್ಳುತ್ತದೆ. ಈ ನೀತಿಯು ಅನುಷ್ಠಾನಕ್ಕೆ ಸಂಪನ್ಮೂಲಗಳ ಅಂದಾಜು, ಅನುಷ್ಠಾನಕ್ಕೆ ಮಾರ್ಗಸೂಚಿಗಳನ್ನು ರೂಪಿಸುವುದು, ಜವಾಬ್ದಾರಿಯುತ ಸರ್ಕಾರಿ ಇಲಾಖೆಗಳ ಮೇಲ್ವಿಚಾರಣೆ ಮತ್ತು ಪೋಷಕರು, ಶಿಕ್ಷಕರು, ವೈದ್ಯರು, ಪೊಲೀಸರು, ಇತ್ಯಾದಿಗಳ ಸಂವೇದನಾ ಶೀಲತೆಯಂತಹ ಕ್ರಮಗಳನ್ನು ನೀತಿಯು ನಿರ್ದಿಷ್ಟವಾಗಿ ಗುರುತಿಸುತ್ತದೆ. ಸುಸ್ಥಿರತೆಯ ಕ್ರಮಗಳು, ವಿದಾರ್ಥಿ ವೇತನವನ್ನು ಒದಗಿಸುವುದು, ಕೌಶಲ್ಯವರ್ಧನೆಯ ಮತ್ತು ಅಸ್ತಿತ್ವದಲ್ಲಿರುವ ಯೋಜನೆಗಳಲ್ಲಿ ತೃತೀಯ ಲಿಂಗಿಯ ಸಮುದಾಯ ಸೇರಿಸಲು ಅವಕಾಶ ಕಲ್ಪಿಸುತ್ತದೆ.

## 8 ಮನಸ್ವಿನಿ ಯೋಜನೆ:

ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಅವಿವಾಹಿತ, ವಿಚ್ಛೇದಿತ ಮಹಿಳೆಯರಿಗೆ ಹಾಗೂ ತೃತಿಯ ಲಿಂಗಿ ವ್ಯಕ್ತಿಗಳಿಗೆ ಆರ್ಥಿಕ ಭದ್ರತೆ ಒದಗಿಸಲು ಕರ್ನಾಟಕ ಸರ್ಕಾರ ಮನಸ್ವಿನಿ ಯೋಜನೆ ಜಾರಿಮಾಡಿದೆ. ಈ ಯೋಜನೆಯಡಿ ಅವಿವಾಹಿತ ಹಾಗೂ ವಿಚ್ಛೇದನ ಪಡೆದಿರುವ ಮಹಿಳೆಯರಿಗೆ, ತೃತಿಯ ಲಿಂಗಿ ವ್ಯಕ್ತಿಗಳಿಗೆ ಪ್ರತಿ ತಿಂಗಳು 500 ರೂಪಾಯಿ ಮಾಶಾಸನ ನೀಡಲಾಗುತ್ತದೆ. 65ವರ್ಷಕ್ಕಿಂತ ಹೆಚ್ಚು ವಯಸ್ಸಿನ ಅವಿವಾಹಿತ, ವಿಚ್ಛೇಧಿತ ಮಹಿಳೆಯರು ಹಾಗೂ ತೃತಿಯಲಿಂಗಿ ವ್ಯಕ್ತಿಗಳಿಗೆ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಯಡಿ ಪ್ರಯೋಜನ ಪಡೆಯಬಹುದು. ಬಡತನ ರೇಖೆಗಿಂತ ಕೆಳಗಿರುವ 40 ರಿಂದ 65 ವರ್ಷದೊಳಗಿನ ಅವಿವಾಹಿತ ಹಾಗೂ ವಿಚ್ಛೇದನ ಪಡೆದಿರುವ ಮಹಿಳೆಯರಿಗೆ, ತೃತಿಯ ಲಿಂಗಿ ವ್ಯಕ್ತಿಗಳಿಗೆ ಆರ್ಥಿಕ ನೆರವು ನೀಡಿ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಮನಸ್ವಿನಿ ಯೋಜನೆ ಜಾರಿಗೊಳಿಸಲಾಗಿದೆ. ತೃತಿಯಲಿಂಗಿ ವ್ಯಕ್ತಿಗಳಿಗೆ ನಿರ್ದಿಷ್ಟವಾಗಿ ಗುರುತು ಪಡಿಸಿದ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸುವುದು. ಸಮಾನತೆಯನ್ನುಉತ್ತೇಜಿಸುವಲ್ಲಿ ಮತ್ತು ಅವರ ಅನನ್ಯ ಅಗತ್ಯಗಳನ್ನು ಬೆಂಬಲಿಸುವಲ್ಲಿ ನಿರ್ಣಾಯಕವಾಗಿದೆ. ಈ ಯೋಜನೆಗಳು ಆರೋಗ್ಯ ರಕ್ಷಣೆ, ಶಿಕ್ಷಣ, ಉದ್ಯೋಗಾವಕಾಶಗಳು, ಮಾನಸಿಕ ಆರೋಗ್ಯ ಬೆಂಬಲ ಮತ್ತು ವಸತಿ ಸಹಾಯಕ್ಕೆ ಪ್ರವೇಶವನ್ನು ಒದಗಿಸುವುದರ ಮೇಲೆ ಕೇಂದ್ರೀಕರಿಸಬೇಕು. ತಾರತಮ್ಯ ಮತ್ತು ಸಾಮಾಜಿಕ ಬಹಿಷ್ಕಾರದಂತಹ ಪದ್ಧತಿಗಳನ್ನು ಎದುರಿಸುತ್ತಿರುವ ಈ ಸಮುದಯಕ್ಕೆ ನಿರ್ದಿಷ್ಟ ಸವಾಲುಗಳನ್ನು ಪರಿಹರಿಸುವ ಮೂಲಕ ಈ ಕಲ್ಯಾಣ ಯೋಜನೆಗಳು ತೃತಿಯ ಲಿಂಗಿಗಳು ಮತ್ತು ಸಮಾಜದ ನಡುವಿನ ಅಂತರವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಮನಸ್ವಿನಿ, ಸ್ಮೈಲ್, ಆಯುಷ್ಮಾನ್ ಭಾರತ್ ಟಿಜಿಪ್ಲಸ್ ಯೋಜನೆ ಮುಂತದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿದಲ್ಲಿ ಇದು ಸುಧಾರಿತ ದೈಹಿಕ, ಮಾನಸಿಕ ಯೋಗಕ್ಷೇಮ, ಹೆಚ್ಚಿದ ಆತ್ಮವಿಶ್ವಾಸ ಮತ್ತು ಸಮಾಜದಲ್ಲಿ ಉತ್ತಮ ಏಕೀಕರಣಕ್ಕೆ ಕಾರಣವಾಗಬಹುದು. ಅಂತಿಮವಾಗಿ ಅವರ ಒಟ್ಟಾರೆ ಯೋಗಕ್ಷೇಮ ಮತ್ತು ಜೀವನದ ಗುಣಮಟ್ಟವನ್ನು ಉತ್ತೇಜಿಸುತ್ತದೆ. ಈ ಕಲ್ಯಾಣ ಕಾರ್ಯಕ್ರಮಗಳು ತೃತಿಯ ಲಿಂಗಿ ವ್ಯಕ್ತಿಗಳಿಗೆ ಆರೋಗ್ಯದ ಅಸಮಾನತೆಗಳು, ನಿರುದ್ಯೋಗದರಗಳು ಮತ್ತು ಬಡತನದ ಮಟ್ಟವನ್ನು ಕಡಿಮೆ ಮಾಡಲು ಕೊಡುಗೆ ನೀಡಬಹುದು. ದಮನಿತ ಸಮುದಾಯಕ್ಕೆ ಅಗತ್ಯ ಸಂಪನ್ಮೂಲಗಳು ಮತ್ತು ಬೆಂಬಲವನ್ನು ಒದಗಿಸುವ ಮೂಲಕ, ಈ ಯೋಜನೆಗಳು ತೃತಿಯಲಿಂಗಿ ಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿ ಹೊಂದಲು ಮತ್ತು ಕೊಡುಗೆ ನೀಡಲು ಅನುವು ಮಾಡಿಕೊಡುತ್ತವೆ. ಒಟ್ಟಾರೆಯಾಗಿ ಹೆಚ್ಚು ಒಳಗೊಳ್ಳುವ ಮತ್ತು ಸಮಸಮಾಜವನ್ನು ರಚಿಸುವಲ್ಲಿ ಈ ಕಾರ್ಯಕ್ರಮಗಳು ಮಹತ್ವದಪಾತ್ರ ವಹಿಸುತ್ತವೆ. ರಾಜ್ಯ, ಕೇಂದ್ರ ಸರ್ಕಾರಗಳು ಮತ್ತು ನೀತಿ ನಿರೂಪಕರು ಈ ಯೋಜನೆಗಳನ್ನು ಕಾರ್ಯ ಗತಗೊಳಿಸಲು ಪೂರ್ವಭಾವಿಕ್ರಮಗಳನ್ನು ತೆಗೆದುಕೊಳ್ಳುವುದು ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಹೆಜ್ಜೆಯಿಡೋಣ ಹಾಗೂ ಎಲ್ಲರನ್ನೂ ಗೌರವಿಸೋಣ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T